

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 07 | Issue : 261 | Saturday 28-06-2025 | E-mail : maruti.b.hosamani76@gmail.com | Page: 4 | Price : Rs. 1/-


**"ಎನ್ನೆದೆಯ ಹಣತೆ".....**

ಅಂದು
ಮನಸಾರೆ
ನೆಚ್ಚಿದ ನನ್ನೊಲವನು
ಮಗುವಿನಂತೆ
ಅಪ್ಪಿದವ
ಇಂದು...!

ಶಶಿಯ ಆಗಮನಕೆ
ಚಕೋರ......
ಹಂಬಲಿಸುವಂತೆ
ಅವನೊಲವಿಗಾಗಿ
ಹಂಬಲಿಸುವ
ನನ್ನೀ ಮನವನು
ಅಡ್ಡಗಟ್ಟಿ.......
ತಡೆಯಬೇಕಂತೆ!

ಆಕಾಶಕ್ಕೆ ಏಣಿ
ಹಾಕುವ ಸಾಹಸ
ಮಾಡುವುದ್ಹೇಗೆ ಸಖಿ?

ಸಾಗರದ ಅಲೆಯಂತೆ
ದುಮ್ಮಿಕ್ಕುವ
ಅವನ ಮೇಲಿನ
ನನ್ನೊಲವನು ತಡೆಹಿಡಿದರೆ......
ಹುಟ್ಟುಗೋಲಿಲ್ಲದ ದಿಕ್ಕೆಟ್ಟ
ಅಂಬಿಗಳಾಗುವೆ...

'ಅವನೊಲವೇ
ಎನ್ನ ಎದೆಯ ಹಣತೆ'!
ಇದ ಅವಗೆ ಒಪ್ಪೈಸುವುದ್ಹೇಗೆ
ಸಖಿ?



**–ಡಿ.ಶಬ್ರಿನಾ ಮಹಮದ್ ಅಲಿ ಚಳ್ಳಕೆರೆ**

# ಶ್ವೇತ ಪತ್ರ ಹೊರಡಿಸುವಂತೆ ಸರಕಾರಕ್ಕೆ ಸವಾಲ್ ಹಾಕಿದ ನಿಖಿಲ್ ಕುಮಾರಸ್ವಾಮಿ



**ಸಿಹಿ ಕಹಿ ಸುದ್ದಿ,**
**ಮಾನ್ವಿ :** ಜೆ.ಡಿ.ಎಸ್ ಪಕ್ಷದಿಂದ ವಿನೂತನವಾಗಿ ಜನರೊಂದಿಗೆ ಜನತಾದಳ, ಸಶಕ್ತ ಜನತಾದಳ, ಸಮೃದ್ಧ ಕರ್ನಾಟಕ ಹೆಸರಿನಲ್ಲಿ ರಾಜ್ಯಾದ್ಯಾಂತ ಜೆ.ಡಿ.ಎಸ್ ಪಕ್ಷದ ಬಲ ವರ್ಧನೆಗಾಗಿ ಹಾಗೂ ಸಂಘಟನೆಗಾಗಿ ಪ್ರವಾಸ ಕೈಗೊಂಡಿದ್ದೇನೆ ಎಂದು ಜೆ.ಡಿ.ಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು.
ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದ ಎ.ಪಿ.ಎಂ.ಸಿ ಆವರಣದಲ್ಲಿ ಜರುಗಿದ ಜೆ.ಡಿ.ಎಸ್ ಕಾರ್ಯಕರ್ತರ ಸಭೆ ಹಾಗೂ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ.
ಕಲ್ಯಾಣ ಕರ್ನಾಟಕಕ್ಕೆ 13 ಸಾವಿರ ಕೋಟಿ ನೀಡಿರುವುದಾಗಿ ಮುಖ್ಯ ಮಂತ್ರಿಗಳು ಹೇಳುತ್ತಾರೆ ಆದರೆ. ಈ ಭಾಗದಲ್ಲಿ ಸಂಚಾರ ಮಾಡುತ್ತಿರುವ ನನಗ ಎಲ್ಲಿಯೂ ಕೂಡ ಹೊಸ ಆಸ್ಪತ್ರೆಗಳು ಕಾಣುತ್ತಿಲ್ಲ. ಆಸ್ಪತ್ರೆಗಳಲ್ಲಿ ವೈದ್ಯರೆ ಇಲ್ಲಾ. ಸರಿಯಾದ ರಸ್ತೆಗಳೇ ಇಲ್ಲಾ ಎಂದು ಲೇವಡಿ ಮಾಡಿದರು.
ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕ ಮಾತನಾಡಿ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ಇಡಬೇಕಾದ ಅನುದಾನವನ್ನು ಬಳ್ಳಾರಿ, ರಾಯಚೂರು ಮತ್ತು ತೆಲಂಗಾಣದಲ್ಲಿ ನಡೆದ ಚುನಾವಣೆಗೆ ಹಣವನ್ನು ದುರ್ಬಳಕೆ ಮಾಡಿ ಕೊಳ್ಳಲಾಗಿದೆ. ಇದು ಎಂಥ ನ್ಯಾಯ ಜನರೇ ಕಾಂಗ್ರೆಸ್ ಸರಕಾರದ ದುರಾಡಳಿತ ನೋಡಿ ಎಂದು ಕಿಡಿ ಕಾರಿದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಹುಸೇನ್.ಭಾಷಾ.ನಕ್ಕುಂದಿ.ಮಾನ್ವಿ**

# ಮಾದಿಗ ಸಮುದಾಯದ ಪ್ರತಿಭೆಗಳಾದ ಕು.ಸಂಜನಾ ಮತ್ತು ಕು.ಪ್ರಫುಲ್ ಅವರಿಗೆ ಸನ್ಮಾನ ಮತ್ತು ಅಭಿನಂದನಾ ಸಮಾರಂಭ

**ಸಿಹಿ ಕಹಿ ಸುದ್ದಿ,**
**ಕುಷ್ಟಗಿ :** ದಿನಾಂಕ 26/06/25 ರಂದು ಸಂಜೆ ಕುಷ್ಟಗಿಯ ವಾಲ್ಮೀಕಿ ಭವನದಲ್ಲಿ ಕುಷ್ಟಗಿ ತಾಲೂಕಿನ ಮಾದಿಗ ನೌಕರರ ಸಂಘದ ವತಿಯಿಂದ ನಮ್ಮ ಮಾದಿಗ ಸಮುದಾಯದ ನೌಕರರು ಆದ ಶ್ರೀ ಶಶಿಕಾಂತ ಶಾಖಾಪೂರ ಶಿಕ್ಷಣ ಇಲಾಖೆ ದೋಟೀಹಾಳ ಇವರ ಸಹೋದರ (ತಮ್ಮ) ನ ಮಗಳಾದ ಕುಮಾರಿ ಸಂಜನಾ ಇವರು ಒಃಃಖ ನೀಟ್ ಪರೀಕ್ಷೆಯಲ್ಲಿ ರಾಜ್ಯಕ್ಕೆ 3800 ರ್ಯಾಂಕ್ ಗಳಿಸಿ ಉತ್ತಮ ಸಾಧನೆ ಮಾಡಿದ್ದಾರೆ ಹಾಗೂ ಶ್ರೀಯುತ ದಂಡಪ್ಪ ಹೊಸಮನಿ. ಅಖಿಕ ಶಿಕ್ಷಣ ಇಲಾಖೆ ಇವರ ಸುಪುತ್ರ ಕುಮಾರ ಪ್ರಫುಲ್.ದಂಡಪ್ಪ ಹೊಸಮನಿ ಓಇಇಖ ಪರೀಕ್ಷೆಯಲ್ಲಿ 2613 ರ್ಯಾಂಕ್ ಗಳಿಸಿದ್ದಾರೆ.
ಆದ್ದರಿಂದ ಸಮುದಾಯದ ಎಲ್ಲಾ ನೌಕರರು ಸೇರಿ ಇಂದು ದಿನಾಂಕ 26/6/2025 ಗುರುವಾರ ಸಂಜೆ 5:30 ಶ್ರೀ ಮಹರ್ಷಿ ವಾಲ್ಮೀಕಿ ಭವನ ಕುಷ್ಟಗಿಯಲ್ಲಿ ಸನ್ಮಾನ ಕಾರ್ಯಕ್ರಮ ಹಮ್ಮಿಕೊಂಡರು. ಸಾಧನೆಗೈದ



ಕುಮಾರಿ ಸಂಜನಾ ಹಾಗೂ ಕುಮಾರ ಪ್ರಫುಲ್ ಇರ್ವರಿಗೂ ಅಭಿನಂದನೆ ಹಾಗೂ ಮುಂದಿನ ವಿದ್ಯಾಭ್ಯಾಸಕ್ಕೆ ಶುಭಾಷಯಗಳನ್ನು ಕೋರಲಾಯಿತು.
ಈ ಸಂಧರ್ಭದಲ್ಲಿ ಅಧ್ಯಕ್ಷರು ಲಕ್ಷ್ಮಣ್ ಸರ್, ಕಾರ್ಯದರ್ಶಿ ಮಹಾಂತೇಶ ಜಾಲಿಗಿಡದ, ಖಜಾಂಚಿ, ವಿಜಯಕುಮಾರ್ ಮೈತ್ರಿ, ಸಂಘಟನಾ ಕಾರ್ಯದರ್ಶಿ ಮಹೇಂದ್ರ ಹೋಸಮನಿ, ವಿಠಲ್ ಎಮ್, ಮಾರ್ಗದರ್ಶಕರು, ದಂಡಪ್ಪ ಸರ್, ಸಮಾಜದ ವಕೀಲರುಗಳಾದ ಶಿವಕುಮಾರ ದೊಡ್ಡಮನಿ, ಸುಖಮುನಿ ಗುಮಗೇರ, ಹಾಗೂ ಚಿದಾನಂದ ಇಂಡಿ, ಧರ್ಮರಾಜ, ದೊಡ್ಡಮನಿ, ಬುಡ್ಡಪ್ಪ ದೋಟಿಹಾಳ, ಮಂಜುನಾಥ,ಹೊಸಮನಿ, ಶ್ರೀಕಾಂತ್‌ಕೆಂಗಾರಿ,ಪರಶುರಾಮಸರ್‌ಲಕ್ಷ್ಮಣ್ ಸರ್, ಮುಂತಾದವರು ಪಾಲ್ಗೊಂಡಿದ್ದರು ಎಂದು ವರದಿಯಾಗಿದೆ.

**ವರದಿ:**
**ಶಿವಕುಮಾರ.ದೊಡ್ಡಮನಿ.**
**ವಕೀಲರು.ಕುಷ್ಟಗಿ**

# ದಾವಲ್ ಮಲ್ಲಿಕ್ ಬಾಲಕರ ರಾಷ್ಟ್ರೀಯ ಕಬ್ಬಡಿ ಚಾಂಪಿಯನ್ ಶಿಪ್‌ಗೆ ಆಯ್ಕೆ

**ಸಿಹಿ ಕಹಿ ಸುದ್ದಿ, ರೋಣ :** ಗದಗ ಜಿಲ್ಲೆಯ ರೋಣ ತಾಲೂಕಿನ ಒಂದಿಲ್ಲಾ ಒಂದು ಕ್ಷೇತ್ರದಲ್ಲಿ ಹೆಸರು ವಾಸಿಯಾಗುತ್ತಲೇ ಇದೆ ಈ ಬಾರಿ ಹರಿದ್ವಾರ ರಾಜ್ಯದ ರಾಣಿಪುರ್ ಮಾಡ ಬಳಿ ಇರುವ ಶ್ರೀ ಪ್ರೇಮ ನಗರ ಆಶ್ರಮದಲ್ಲಿ ರಾಷ್ಟ್ರೀಯ ಕಬಡ್ಡಿ ಚಾಂಪಿಯನ್ ಶಿಪ್ 28/06/2025 ರಿಂದ 01/7/2025 ರ ವರೆಗೆ ರಾಷ್ಟ್ರೀಯ ಕಬ್ಬಡ್ಡಿ ಚಾಂಪಿಯನ್ ಶಿಪ್ ನಡೆಯಲಿದೆ. ಈ ಚಾಂಪಿಯನ್ ಶಿಪ್ ಗೆ ಪ್ರಪ್ರಥಮ ಬಾರಿಗೆ 18 ವರ್ಷ ದೊಳಗಿನ ಬಾಲಕರ ಕಬಡ್ಡಿ ಚಾಂಪಿಯನ್ ಶಿಪ್ ನಲ್ಲಿ ನಮ್ಮ ಕರ್ನಾಟಕ ರಾಜ್ಯವನ್ನು ಪ್ರತಿ ನಿಧಿಸುತ್ತಿರುವ ಗದಗ ಜಿಲ್ಲೆಯ ರೋಣ ತಾಲೂಕಿನ ಯುವ ಆಟಗಾರ ದಾವಲ್ ಮಲ್ಲಿಕ್ ಇದ್ಲಿ ಈತನು



ಆಯ್ಕೆ ಯಾಗಿದ್ದಾನೆ. ಈತನು ಬಿ.ಸಿ ರಮೇಶ್ ಕಬಡ್ಡಿ ಅಕಾಡೆಮಿ ರೋಣ ಹಾಗೂ ಯುವ ಮಿತ್ರ ಸ್ಪೋರ್ಟ್ಸ್ ಕ್ಲಬ್ ರೋಣ ಈ ಸಂಸ್ಥೆಯ ಹೆಮ್ಮೆಯ ಆಟಗಾರ ಈತನಾಗಿದ್ದಾನೆ. ಯುವಕನಿಗೆ ಸದಾ ಮುತ್ತಣ್ಣ.ಬ ಪ್ರಧಾನಿ ಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಇಲಾಖೆ ರೋಣ ಇವರು ಸತತವಾಗಿ ಶ್ರಮಿಸಿದ್ದಾರೆ. ಹೀಗೆ ಈ ಯುವಕನ ಸಾಧನೆ ಉನ್ನತ ಮಟ್ಟಕ್ಕೆ ಮುಂದುವರೆಯಲಿ ಎಂದು ನಮ್ಮ ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್ ಆಶಿಸುತ್ತದೆ. **ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎಸ್.ವಿ ಸಂಕನಗೌಡ್ರ. ರೋಣ.ಗದಗ**

# ಇಡೀ ವಿಶ್ವಕ್ಕೆ ಯೋಗ ಕಲಿಸಿದ್ದು ಭಾರತ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್
# ಯೋಗವೇ ನನ್ನ ಆರೋಗ್ಯದ ಗುಟ್ಟು: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

**ಉಡುಪಿ :** ಇಡೀ ವಿಶ್ವವೇ ಭಾರತದ ಆರೋಗ್ಯ ಪದ್ಧತಿಯನ್ನು ಅಳವಡಿಸಿಕೊಂಡಿದೆ.
ಪ್ರತಿಯೊಬ್ಬರು ಯೋಗವನ್ನು ನಿತ್ಯ ಪರಂಪರೆಯಾಗಿ ಅಳವಡಿಸಿಕೊಳ್ಳಬೇಕು, ಪ್ರತಿದಿನ ಕನಿಷ್ಠ 30 ನಿಮಿಷವಾದರೂ ಯೋಗ ಮಾಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.
ಅಜ್ಜರಕಾಡು ವಿನಲ್ಲಿರುವ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ನಡೆದ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಯೋಗದಿಂದ ಮಾತ್ರ ಮನಸ್ಸಿಗೆ ಉಲ್ಲಾಸ ಸಿಗುತ್ತದೆ ಎಂದರು.
ನಾನು ಕಳೆದ 25 ವರ್ಷಗಳಿಂದ ಯೋಗಾಭ್ಯಾಸ ಮಾಡುತ್ತಿದ್ದೇನೆ. ನಾನು ದಿನಕ್ಕೆ 15 ಗಂಟೆ ಕೆಲಸ ಮಾಡುವ ಸಾಮರ್ಥ್ಯದ ಹಿಂದೆ



ಯೋಗವಿದೆ. ಇದೇ ಜನವರಿ 14 ರಂದು ನನಗೆ ಅಪಘಾತ ಆಯಿತು, ಬೆನ್ನು ನೋವಿನಿಂದಾಗಿ ಇಂದು ಯೋಗ ಮಾಡಲು ಸಾಧ್ಯವಾಗಲಿಲ್ಲ ಎಂದು ಹೇಳಿದರು.
ನಾನು ವಾರಕ್ಕೆ ಐದು ದಿನ ಯೋಗ ಮಾಡುತ್ತೇನೆ. ಇವತ್ತಿನ ಆಧುನಿಕ ಜಗತ್ತಿನಲ್ಲಿ ಯೋಗ ಬೇಕೇ ಬೇಕು. ಪ್ರತಿ ದಿನ 25 ರಿಂದ 50 ಸೂರ್ಯ ನಮಸ್ಕಾರ ಮಾಡುತ್ತಿದ್ದೆ. ಭುಜಂಗಾಸನ, ವೀರಭದ್ರಾಸನ, ಪ್ರಾಣಾಯಾಮ ನನ್ನ ಆರೋಗ್ಯದ ಗುಟ್ಟು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.
ಉಡುಪಿ ಜಿಲ್ಲೆ ಎಸ್–ಎಸ್ ಎಲ್ಸಿಯಲ್ಲಿ ಎರಡನೇ, ಪಿಯುಸಿಯಲ್ಲಿ ಮೊದಲ ಸ್ಥಾನ ಪಡೆದಿದ್ದು, ಶೈಕ್ಷಣಿಕವಾಗಿ ಜಿಲ್ಲೆ ತನ್ನ ಸಾಮರ್ಥ್ಯ ಹೆಚ್ಚಿಸಿಕೊಂಡಿದೆ. ದೇಶದ ಸಂಸ್ಕೃತಿ ಆಚಾರ, ವಿಚಾರವನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು, ತಂದೆ ತಾಯಂದಿರು ನಮ್ಮ ಮಕ್ಕಳೇ ನಮಗೆ ಆಸ್ತಿ ಎನ್ನುತ್ತಾರೆ. ಮಕ್ಕಳು ಕೂಡ ನಮ್ಮ ತಂದೆ ತಾಯಿಯೇ ನಮ್ಮ ಆಸ್ತಿ ಎನ್ನುವಂತೆ ಆಗಲಿ ಎಂದು ಹೇಳಿದರು.
ಯೋಗವೆಂದರೆ ಕೇವಲ ವ್ಯಾಯಾಮ, ಪ್ರಾಣಾಯಾಮ ಮಾತ್ರ ಅಲ್ಲ, ಅದೊಂದು ಆರೋಗ್ಯಕರ ಜೀವನದ ವಿಧಾನ, ಯೋಗವಿದ್ದಲ್ಲಿ ರೋಗವಿಲ್ಲ, ಯೋಗವೇ ಭೋಗವಾದರೆ ಮನುಷ್ಯನ ಎಲ್ಲಾ ಚಟುವಟಿಕೆಗಳು ಸ್ವಾಭಿಮಾನದ ಸ್ವಾತಂತ್ರ್ಯವನ್ನು ಗಳಿಸುತ್ತದೆ. ನಮ್ಮ ಪ್ರಧಾನಿ ಮೋದಿ ಅವರು ಇಡೀ ವಿಶ್ವಕ್ಕೆ ಯೋಗದ ಮಹತ್ವದ ಬಗ್ಗೆ ಹೇಳಿಕೊಟ್ಟರು ಎಂದರು.
ಈ ವೇಳೆ ಶಾಸಕ ಯಶ್ಪಾಲ್ ಸುವರ್ಣ, ಗುರ್ಮೆ ಸುರೇಶ್ ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಶೋಕ್ ಕೊಡವೂರು,
ಪ್ರವಾಸ್ ರಾಜ್ ಕಾಂಚನ್, ರಮೇಶ್ ಕಾಂಚನ್, ಜಿಲ್ಲಾಧಿಕಾರಿ ಸ್ವರೂಪ. ಟಿ.ಕೆ, ಜಿಲ್ಲಾ ಪಂಚಾಯತ್ ಸಿಇಒ ಪ್ರತೀಕ್ ಬಾಯಲ್,
ಡಿಎಫ್ ಒ ಗಣಪತಿ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಸತೀಶ್ ಆಚಾರ್ಯ, ಕ್ರೀಡಾ ಇಲಾಖೆ ಉಪ ನಿರ್ದೇಶಕ ರೋಷನ್ ಶೆಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮೊಸರಲ್ಲಿ ಕಲ್ಲು ಹುಡುಕುವುದೇ ಬಿಜೆಪಿಗರ ಕೆಲಸ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

**ಉಡುಪಿ :** ವಸತಿ ಯೋಜನೆಯಲ್ಲಿ ಅಲ್ಪಸಂಖ್ಯಾತರಿಗೆ ಶೇಕಡ 5ರಷ್ಟು ಏರಿಕೆ ಮಾಡಿದ್ದು ಕೇಂದ್ರ ಸರ್ಕಾರ. ರಾಜ್ಯ ಸರ್ಕಾರ ಅದಕ್ಕೆ ಒಪ್ಪಿಗೆ ಸೂಚಿಸಿದೆಯಷ್ಟೇ. ಈ ವಿಷಯದಲ್ಲಿ ಬಿಜೆಪಿ ನಾಯಕರು ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಕಿಡಿ ಕಾರಿದರು.
ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿದ ಸಚಿವರು, ರಾಜಕಾರಣ ಮಾಡಲು ಬೇರೆ ವಿಚಾರ ಉಳಿದಿಲ್ಲ. ಮೊದಲು ಗ್ಯಾರಂಟಿ ಯೋಜನೆಗಳನ್ನು ಟೀಕೆ ಮಾಡಿದರು. ಗ್ಯಾರಂಟಿ ಯೋಜನೆಗಳು ಯಶಸ್ವಿ ಆಗುವುದಿಲ್ಲ ಎಂದರು. ನಾವು 136 ಸೀಟು ಗೆದ್ದರೂ ಆರು ತಿಂಗಳು ಸರ್ಕಾರ ಉಳಿಯಲ್ಲ ಎಂದರು, ಜನರ ಭಾವನೆಗಳ ಜೊತೆ ಬಿಜೆಪಿ ಆಟವಾಡುತ್ತದೆ. ಮಾತನಾಡಲು ಅವರಿಗೆ ಬೇರೇನೂ ಉಳಿದಿಲ್ಲ ಎಂದು ದೂರಿದರು.

**ಮುಂಜಾಗ್ರತಾ ಕ್ರಮ ಕೈಗೊಳ್ಳಲು ಸೂಚನೆ**

ಈ ವರ್ಷ ವಾಡಿಕೆಗಿಂತ ಹೆಚ್ಚಿನ ಮಳೆಯಾಗುವ ಲಕ್ಷಣ ಇದೆ. ಹೀಗಾಗಿ ಮಳೆ ಅವಾಂತರ ನಿಯಂತ್ರಿಸಲು ಮುಂಜಾಗ್ರತಾ ಕ್ರಮ ಕೈಗೊಳ್ಳಲು ಸೂಚಿಸಿದ್ದೇನೆ. ಯಾವುದೇ ಪ್ರಮಾಣದಲ್ಲಿ ಮಳೆ ಬಂದರೂ ನಾವು ಸಿದ್ಧವಾಗಿದ್ದೇವೆ ಎಂದು ಸಚಿವರು ಹೇಳಿದರು.

**ಸೂಲಿಬೆಲೆ ಸುಳ್ಳಿನ ಚಕ್ರವರ್ತಿ**

ಕುಂದಾಪುರದಲ್ಲಿ ಚಕ್ರವರ್ತಿ ಸೂಲಿಬೆಲೆ ಉಪನ್ಯಾಸಕ್ಕೆ ಎನ್‌ಎಸ್ ಯುಐ ಅಕ್ಷೇಪ ವ್ಯಕ್ತಪಡಿಸಿರುವ ಕು–ರಿತು ಪ್ರತಿಕ್ರಿಯಿಸಿದ ಸಚಿವರು, ಚಕ್ರವರ್ತಿ ಸೂಲಿಬೆಲೆ ಸುಳ್ಳಿನ ಚಕ್ರವರ್ತಿ. ಬಾಯಿ ತೆರೆದರೆ ರಾಮಾಯಣ, ಭಗವದ್ಗೀತೆ, ಮಹಾಭಾರತ ಹೇಳುತ್ತಾರೆ. ಆದರೆ ಯಾವ ಪ್ರಮಾಣದಲ್ಲಿ ಸುಳ್ಳು ಹೇಳುತ್ತಾರೆ ಅನ್ನೋದು ಇಡೀ ಕರ್ನಾಟಕಕ್ಕೆ ಗೊತ್ತು ಎಂದರು.



ಕಪ್ಪಗಿರುವುದನ್ನು ಬೆಳ್ಳಗೆ ಮಾಡುವುದರಲ್ಲಿ, ಬೆಳ್ಳಗೆ ಇರುವುದನ್ನು ಕಪ್ಪು ಮಾಡುವುದರಲ್ಲಿ ನಿಸ್ಸೀಮರು. ವಾಕ್ ಸ್ವಾತಂತ್ರ್ಯ ಸೇರಿದಂತೆ ಎಲ್ಲಾ ರೀತಿಯ ಸ್ವಾತಂತ್ರ್ಯವನ್ನು ಕಾಂಗ್ರೆಸ್ ಪಕ್ಷ ಕೊಟ್ಟಿದೆ. ಇಡೀ ದೇಶದ ಇತಿಹಾಸದಲ್ಲಿ ಸಂವಿಧಾನವನ್ನು ಎತ್ತಿ ಹಿಡಿದ ಪಕ್ಷ ಕಾಂಗ್ರೆಸ್ ಎಂದು ಸಚಿವರು ಹೇಳಿದರು.
ನಾವು ಚಕ್ರವರ್ತಿ ಸೂಲಿಬೆಲೆ ಅವರಿಂದ ಪಾಠ ಕೇಳಬೇಕಾಗಿಲ್ಲ. ಮೂರು ದಿನ ಉಡುಪಿ ಜಿಲ್ಲೆಯಲ್ಲಿ ಸೂಲಿಬೆಲೆ ಇರುವ ವಿಚಾರ ಪೊಲೀಸ್ ವರಿಷ್ಠಾಧಿಕಾ–ರಿಗಳಿಂದ ತಿಳಿಯಿತು. ಖಂಡಿತವಾಗಿ ಸೂಲಿಬೆಲೆ ತಮ್ಮ ಪ್ರವಾಸ ಮಾಡಬಹುದು. ದ್ವೇಷದ ಭಾಷಣ, ಸುಳ್ಳು ಬಿತ್ತುವ ಕೆಲಸ, ವಿಷ ಬೀಜ ಬಿತ್ತುವ ಕೆಲಸ ಮಾಡದಿರಲಿ. ಯಾಕೆಂದರೆ ಉಡುಪಿ ಶಾಂತಿ ಪ್ರಿಯರ ಜಿಲ್ಲೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

**ಬಿಜೆಪಿ ಶಾಸಕರ ಆಕ್ಷೇಪಕ್ಕೆ ಸಚಿವರ ತಿರುಗೇಟು**

ಒಂದು ಕಡೆ ಬಿಜೆಪಿ ಕೋಮುವಾದವನ್ನು ಪ್ರಚೋದನೆ ಮಾಡುತ್ತದೆ. ನಾವು ಕೋಮು ಪ್ರಚೋದನೆ ಮಾಡುತ್ತಿಲ್ಲ ಎನ್ನುತ್ತಾರೆ. ಇನ್ನೊಂದು ಕಡೆ ಕೋಮು ನಿಗ್ರಹದಳಕ್ಕೆ ವಿರೋಧ ವ್ಯಕ್ತಪಡಿಸುತ್ತಾರೆ. ಇಂಥ ಮನೋಭಾವನೆಯ ಬಿಜೆಪಿ ಶಾಸಕರನ್ನು ನೋಡಿದರೆ ಅವರ ಮನಸ್ಥಿತಿ ಏನು ಅನ್ನೋದು ಉಡುಪಿಯ ಜನತೆಗೆ ಅರ್ಥವಾಗುತ್ತೆ ಎಂದು ಸಚಿವರು ಜಿಲ್ಲೆಯ ಬಿಜೆಪಿ ಶಾಸಕರ ವಿರುದ್ಧ ಕಿಡಿ ಕಾರಿದರು.

# ಶಾಸಕ ಸುನೀಲ್ ಕುಮಾರ್ ಅವರಿಂದ ನೈತಿಕ ಪಾಠ ಕಲಿಬೇಕಿಲ್ಲ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿರುಗೇಟು

**ಉಡುಪಿ :** ಶಾಸಕ ಸುನೀಲ್ ಕುಮಾರ್ ಅವರಿಂದ ನೈತಿಕ ಪಾಠ ಕಲಿಯಬೇಕಿಲ್ಲ. ನೈತಿಕ ಅಧಿಕಾರ ಎಂದರೇನು?.
ಅವರು ಮೊದಲು ನೈತಿ–ಕತೆಯ ಬಗ್ಗೆ ತಿಳಿದುಕೊಂಡು ಮಾತನಾಡಲಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ತಿರುಗೇಟು ನೀಡಿದ್ದಾರೆ.
ಚಕ್ರವರ್ತಿ ಸೂಲಿಬೆಲೆ ಬಗ್ಗೆ ಮಾತನಾಡುವ ಸಚಿವರಿಗೆ ನೈತಿಕತೆ ಇಲ್ಲ ಎಂಬ ಸುನೀಲ್ ಕುಮಾರ್ ಅವರ ಆರೋಪಕ್ಕೆ ಶನಿವಾರ ಪ್ರತಿಕ್ರಿಯಿಸಿದ ಸಚಿವರು, ಉಸ್ತುವಾರಿ ಸಚಿವೆಗೆ ನೈತಿಕತೆ ಇಲ್ಲ ಅಂದರೆ ಏನು. ಸುನೀಲ್ ಕುಮಾರ್ ಬಹಳ ಚಂದ ಮಾತುಗಾರರು, ಅವರನ್ನು ಅವರೇ ಬುದ್ಧಿವಂತ, ಸರ್ವಜ್ಞ ಎಂದು ತಿಳಿದುಕೊಂಡಿದ್ದಾರೆ. ಬೇರೆಯವರನ್ನು ದಡ್ಡರು ಎಂದು ತಿಳಿದುಕೊಂಡಿದ್ದಾರೆ ಎಂದು ಕಿಡಿ ಕಾರಿದರು.

**ಸಚಿವರು ತಮ್ಮ ಇಲಾಖೆ ವ್ಯಾಪ್ತಿಗೆ**

ಎಷ್ಟು ಅಂಗನವಾಡಿಗಳಿವೆ ಲೆಕ್ಕ ಕೊಡಿ ಎಂದು ಸುನೀಲ್ ಕುಮಾರ್ ಕೇಳಿದ್ದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ರಾಜ್ಯದಲ್ಲಿ ಸುಮಾರು 69,000ಅಂಗನವಾಡಿಕಟ್ಟಡಇದೆ, 12,000 ಕಟ್ಟಡ ಬಾಡಿಗೆಯಲ್ಲಿದೆ. ಸುನೀಲ್ ಕುಮಾರ್ ಬಗ್ಗೆ ನಾನು ಎಲ್ಲಾ ಮಾತನಾಡಬೇಕಾ?. ನನ್ನ ಇಲಾಖೆ ಬಗ್ಗೆ ಕೇಳ್ತೀರಾ? ಬನ್ನಿ ನಿಮಗೆ ನಾನು ಎಲ್ಲಾ ಡೀಟೇಲ್ಸ್ ಕೊಡುತ್ತೇನೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸವಾಲು ಹಾಕಿದರು. ರಾಜ್ಯದಲ್ಲಿ ಅಂಗನವಾಡಿಗಳು ಎಷ್ಟಿವೆ. ಕಾರ್ಯಕರ್ತರು ಎಷ್ಟಿದ್ದಾರೆ ಎಲ್ಲಾ ನನಗೆ ಗೊತ್ತು. ಬಾಡಿಗೆ ಕಟ್ಟಡ ಎಷ್ಟು? ಸ್ವಂತ ಕಟ್ಟಡ ಎಷ್ಟು? ಹಳ್ಳಿಯಲ್ಲಿ ಎಷ್ಟಿದೆ! ಪೇಟೆಯಲ್ಲಿ ಎಷ್ಟಿದೆ ಎಷ್ಟು ಸೋರುತ್ತಿದೆ ಎಲ್ಲವೂ ಗೊತ್ತು. ನಿಮ್ಮ ಕ್ಷೇತ್ರದಲ್ಲಿ ಎಷ್ಟು ಇದೆ ಅನ್ನೋದು ಗೊತ್ತು ಎಂದರು.

**ಪ್ರತಿಭಟನೆ ಸಂವಿಧಾನ ಬದ್ಧ ಹಕ್ಕು**

ಪ್ರತಿಭಟನೆಗೆ ಪ್ರಾಮುಖ್ಯತೆ ಇದೆ, ವಿರೋಧ ಪಕ್ಷಕ್ಕೆ ಮಾಡಲು ಬೇರೆ ಕೆಲಸ ಇಲ್ಲ ಪ್ರತಿಭಟನೆ ಮಾಡಲಿ, ಜಿ ಎಸ್ ಟಿ ತರಲು ಆಗಿಲ್ಲ. ಅಭಿವೃದ್ಧಿಯಲ್ಲಿ ಕೇಂದ್ರ ಸರ್ಕಾರ ಅನ್ಯಾಯ ಮಾಡುತ್ತಿದೆ ಅದರ ವಿರುದ್ಧ ಪ್ರತಿಭಟನೆ ಮಾಡಲಿ, ಅಸಮರ್ಥ ಸಂಸದರ ಬಗ್ಗೆ ಪ್ರತಿಭಟನೆ ಮಾಡಲಿ ಎಂದರು.
ನರೇಗಾ ಹಣ ಬಿಡುಗಡೆಯಾಗಿಲ್ಲ, ಅದರ ಬಗ್ಗೆ ಪ್ರತಿಭಟನೆ ಮಾಡಲು ಸಾಧ್ಯವೇ, ಜನರ ದಿಕ್ಕು ತಪ್ಪಿಸುವ ಕೆಲಸ ಬಿಜೆಪಿ ಮಾಡುತ್ತಿದೆ. ಪಕ್ಷದ ಆಂತರಿಕ ಕಚ್ಚಾಟಗಳನ್ನು ಮುಚ್ಚಿಹಾಕಲು ಪ್ರತಿಭಟನೆ ಮಾಡುತ್ತಿದ್ದಾರೆ. ಇದು ಬಿಜೆಪಿಯ ಡ್ರಾಮಾ. ಬಿಜೆಪಿಯ ಕಾರ್ಯಕರ್ತರೇ ಬೇಸತ್ತು ಹೋಗಿದ್ದಾರೆ. ಹೋದಲ್ಲಿ ಬಂದಲ್ಲಿ ಬಿಜೆಪಿ ಕಾರ್ಯಕರ್ತರು ತಮ್ಮ ನಾಯಕರ ವಿರುದ್ಧ ಅಸಮಾಧಾನ ಹೊರಹಾಕುತ್ತಿದ್ದಾರೆ. ಜನರ ದಿಕ್ಕು ತಪ್ಪಿಸಲು ಹೋರಾಟ, ಪ್ರತಿಭಟನೆ ಮಾಡಿ, ಕಾಂಗ್ರೆಸ್ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಸಚಿವರು ಆರೋಪಿಸಿದರು.

**ಸರ್ಕಾರ ಯಾರನ್ನು ಟಾರ್ಗೆಟ್ ಮಾಡುತ್ತಿಲ್ಲ**

ಹಿಂದೂ ಜಾಗರಣ ವೇದಿಕೆ ಮುಖಂಡ ಶ್ರೀಕಾಂತ್ ಶೆಟ್ಟಿಗೆ ಬಾಗಲಕೋಟೆಗೆ ಮೂರು ತಿಂಗಳು ಬ್ಯಾನ್ ಮಾಡಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಸಚಿವರು, ಯಾವ ವಾಗ್ಮಿಗಳನ್ನು, ಭಾಷಣ–ಕಾರರನ್ನು ನಾವು ಟಾರ್ಗೆಟ್ ಮಾಡುತ್ತಿಲ್ಲ. ಯಾವುದೇ ವಿಷಯಗಳು ವಿಷಯಧಾ–ರಿತವಾಗಿರಬೇಕು, ವಿಷಯಾಂತರ ಆಗಬಾರದು ಎಂದರು.
ಸಮಾಜದ ಕೋಮು ಸೌಹಾರ್ದತೆ ಕೆಡಿಸಬಾರದು ಹಿತಾಸಕ್ತಿ ಕಾಪಾಡಬೇಕು. ವಿಷ ಬೀಜ ಬಿತ್ತಿ ಸಮಾಜ ಒಡೆಯಬಾರದು. ಅಂತವರ ವಿರುದ್ಧ ಕಾನೂನು ಕ್ರಮ ಆಗುತ್ತದೆ. ಶ್ರೀಕಾಂತ ಶೆಟ್ಟಿ ಹಿಂದಿನ ಭಾಷಣಗಳನ್ನು ತೆಗೆದು ನೋಡಬೇಕು.
ಆಗ ಎಲ್ಲ ವಿಚಾರ ಅರಿವಾಗುತ್ತೆ ಎಂದು ಹೇಳಿದರು.

# ಗೃಹಲಕ್ಷ್ಮಿ ಯೋಜನೆಯಲ್ಲಿ ಪರಿಷ್ಕರಣೆ ಇಲ್ಲ : ಸಚಿವೆ ಲಕ್ಷ್ಮೀ ಹೆಬ್ಬಾಳಕರ್

**ಬೆಂಗಳೂರು :** ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಪಟ್ಟಿಯಲ್ಲಿ ಯಾವುದೇ ರೀತಿಯ ಪರಿಷ್ಕರಣೆ ಇಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಸ್ಪಷ್ಟಪಡಿಸಿದ್ದಾರೆ.
ವಿಧಾನಸೌಧದಲ್ಲಿ ಗುರುವಾರ ಸುದ್ದಿಗಾರರ ಪ್ರಶ್ನೆಗಳಿಗೆ ಅವರು ಉತ್ತರಿಸಿದರು.
ಹಣ ಸಂದಾಯಕ್ಕೆ ತಾಂತ್ರಿಕ ಸಮಸ್ಯೆ ಆಗುತ್ತಿದೆಯೇ ಎಂಬ ಪ್ರಶ್ನೆಗೆ, ಆತಂಹ ಸಮಸ್ಯೆ ಏನೂ ಇಲ್ಲ ಎಂದರು.
ಈಗಾಗಲೇ ಏಪ್ರಿಲ್ ತಿಂಗಳ ಹಣ ಸಂದಾಯವಾಗಿದ್ದು, ಮೇ ತಿಂಗಳ ಹಣ ವರ್ಗಾವಣೆ ಆಗಬೇಕಿದೆ. ನಮಗೆ ಹಣಕಾಸು ಇಲಾಖೆಯಿಂದ ಹಣ ಬಿಡುಗಡೆ ಆಗಬೇಕಿದೆ. ನಮ್ಮ ಇಲಾಖೆಯ ಬದಲಾಗಿ ಈಗ ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಮೂಲಕ ಹಣ ಸಂದಾಯವಾಗುತ್ತಿದೆ ಎಂದು ಹೇಳಿದರು.
ಗೃಹಲಕ್ಷ್ಮಿ ಯೋಜನೆ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕಾಳಜಿ ಇದೆ. ಯೋಜನೆಗೆ ಯಾವುದೇ ತೊಂದರೆ ಇಲ್ಲ. ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿಗಳ ಮೂಲಕ ಹಣ ಸಂದಾಯವಾಗಬೇಕು ಎಂದು ಕೇಂದ್ರದ ನಿಯಮ ಇದೆ. ಹೀಗಾಗಿ ಫಲಾನುಭವಿಗಳಿಗೆ ಹಣ ತಲುಪಲು ಕೊಂಚ ವಿಳಂಬವಾಗುತ್ತಿದೆ ಎಂದು ಉತ್ತರಿಸಿದರು.
ಪ್ರತಿ ತಿಂಗಳು 10 ರಿಂದ 15 ಸಾವಿರ ಫಲಾನುಭವಿಗಳ ಸಂಖ್ಯೆ ಹೆಚ್ಚುತ್ತಿದೆ.
ನೋಂದಣಿ ಮಾಡಿಕೊಂಡ ಎಲ್ಲಾ ಫಲಾನುಭವಿಗಳಿಗೆ ಹಣ ತಲುಪುತ್ತಿದೆ. ಇದರಲ್ಲಿ ಯಾವುದೇ ಸಮಸ್ಯೆ ಇಲ್ಲ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

# ಯೋಗದಿಂದ ವಿಶ್ವದ ಗಮನ ಸೆಳೆಯುತ್ತಿರುವ ಭಾರತ: ಸಚಿವ ತಿಮ್ಮಾಪುರ

**ಮಹಾಲಿಂಗಪುರ :** ವಿಶ್ವವೇ ನಮ್ಮತ್ತ ಬೆರಗಾಗಿ ನೋಡುವಂತೆ ಮಾಡಿದ ನಮ್ಮ ಯೋಗ ಮತ್ತು ಅದನ್ನು ಕೊಟ್ಟ ನಮ್ಮ ಋಷಿಮುನಿಗಳು ನಮ್ಮ ದೇಶದ ಹೆಮ್ಮೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಆರ್. ಬಿ. ತಿಮ್ಮಾಪುರ ಹೇಳಿದರು.

ಸಮೀಪದ ನಾಗರಾಳ ಗ್ರಾಮದ ಸರ್ಕಾರಿ ಪ್ರೌಢ ಶಾಲಾ ಆವರಣದಲ್ಲಿ ಜಿಲ್ಲಾಡಳಿತ, ಜಿಪಂ, ಜಿಲ್ಲಾ ಆಯುಷ್ ಇಲಾಖೆ, ಗ್ರಾಪಂ, ಶಾಲಾ ಕಾಲೇಜು ಒಕ್ಕೂಟ, ಮಾಧವಾನಂದ ಶಾಲೆ ಸಂಂ–ಯುಕ್ತಾಶ್ರಯದಲ್ಲಿ ಜರುಗಿದ ಅಂತರಾಷ್ಟ್ರೀಯ ಯೋಗದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಸ್ವಾರ್ಥ ಮತ್ತು ಹಣದ ಲಾಲಸೆಯಿಂದ ಹಾಲು, ಹಣ್ಣು, ತರಕಾರಿಗಳನ್ನು ವಿಷಯುಕ್ತ ಮಾಡುತ್ತಿರುವುದರಿಂದ ಪರಿಸ್ಥಿತಿ ಹತೋಟಿ ಮೀರುತ್ತಿದೆ.

ಬದುಕು ದುಸ್ಥರವಾಗುತ್ತಿದೆ. ಇದರಿಂದ ಶೇ. 30 ರಷ್ಟು ಜನರಿಗೆ ಕ್ಯಾನ್ಸರ್ ಆವರಿಸಿದೆ. ವಿದೇಶಗಳು ಇನ್ನೂ ಸಂಕಷ್ಟದಲ್ಲಿವೆ. ಯೋಗ ಮಾತ್ರ ಈಗ ನಮಗೆ ಬೆಳಕಾಗಿ ಕಾಣುತ್ತಿದೆ ಎಂದ ಅವರು ಕ್ಯಾನ್ಸರ್ ತಜ್ಞೆ ಪದ್ಮಶ್ರೀ ಪುರಸ್ಕೃತೆ ಡಾ. ವಿಜಯಲಕ್ಷ್ಮೀ ದೇಶಮಾನೆಯವರಲ್ಲಿ ಪರಿಹಾರಕ್ಕಾಗಿ ಮನವಿ ಮಾಡಿ, ಸಾಧಕಿ ವಿಜಯಲಕ್ಷ್ಮೀಯವರನ್ನು ಆಹ್ವಾನಿಸಿದ ಆರ್. ಟಿ. ಪಾಟೀಲರ ಕಾರ್ಯ ಶ್ಲಾಘನೀಯ ಎಂದರು.

ರೈತ ಮುಖಂಡ ಸುಭಾಸ ಶಿರಬೂರ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ನನಗೂ ಸಾರಾಯಿ ಬಂದ್ ಮಾಡುವ ಯೋಚನೆ ಬಂದಿದೆ.

ಸರ್ಕಾರದ ಮಟ್ಟದಲ್ಲಿ ಚಿಂತನೆ ನಡೆದಿದೆ. ಆಂಧ್ರಪ್ರದೇಶ, ಕೇರಳ ರಾಜ್ಯಗಳು ಸಾರಾಯಿ ಬಂದ್ ಮಾಡಿ ಮತ್ತೆ ಆದೇಶ ಹಿಂಪಡೆಯುವಂಥ ಪರಿಸ್ಥಿತಿ ಬಂತು. ಹಾಗಾಗಿ ನಾವು ಎಚ್ಚರಿಕೆಯ ಹೆಜ್ಜೆ ಇಡಬೇಕು. ರಾಷ್ಟ್ರಮಟ್ಟದಲ್ಲಿ ಸಾರಾಯಿ ಬಂದ್ ಆಗುವುದೇ ಇದಕ್ಕೆ ಪರಿಹಾರ ಎಂದರು.

ವಿಶೇಷ ಅತಿಥಿಯಾಗಿ ಆಗಮಿಸಿದ್ದ ಬೆಂಗಳೂ–




ರಿನ ಕ್ಯಾನ್ಸರ್ ತಜ್ಞೆ, 2025 ನೇ ಸಾಲಿನ ಪದ್ಮಶ್ರೀ ಪುರಸ್ಕೃತೆ ಡಾ. ವಿಜಯಲಕ್ಷ್ಮೀ ದೇಶಮಾನೆ ಮಾತನಾಡಿ ಯೋಗ ರಾಜ ವಿದ್ಯೆ. ಯೋಗಿ ಪತಂಜಲಿ ಪರಿಚಯಿಸಿದರು. ಪ್ರಧಾನಿ ಮೋದಿ ಮನೆಮನೆಗೂ ಯೋಗವನ್ನು ತಲುಪಿಸುತ್ತಿದ್ದಾರೆ.

ಗಳಿಸಿದ್ದೆಲ್ಲಾ ವೈದ್ಯರಿಗೆ ಹೋಗದಿರಲು ಯೋಗ ಉತ್ತಮ ಪರಿಹಾರ. ಸಾತ್ವಿಕ ಆಹಾರ ಅನಿವಾರ್ಯ. ನಮ್ಮ ಹಾಗೂ ದೇಶದ ಸದೃಢತೆಗಾಗಿ ನಿತ್ಯ ಯೋಗ ಅಗತ್ಯ ಎಂದರು.

ಕೊಂಚೂರ ಸವಿತಾ ಪೀಠದ ಸವಿತಾನಂದ ಸ್ವಾಮೀಜಿ ಆಶೀರ್ವಚನ ನೀಡಿ, ಕರ್ನಾಟಕದಲ್ಲಿ 2010 ರಲ್ಲಿ 16 ಸಾವಿರದಷ್ಟಿದ್ದ ಕ್ಯಾನ್ಸರ್ ರೋಗಿಗಳ ಸಂಖ್ಯೆ ಈಗ 9 ಲಕ್ಷ ದಾಟಿದೆ. ಇದು 90 ಲಕ್ಷ ತಲುಪಲು ಹೆಚ್ಚು ಸಮಯ ಬೇಕಿಲ್ಲ. ಒಂದು ವರ್ಷ ನಿರಂತರ ಹಸುವಿನ ಹಾಲು ಕುಡಿದರೆ ಕ್ಯಾನ್ಸರ್ ನಿರ್ಮೂಲನೆಯಾಗುತ್ತದೆ. ಹಾಗಾಗಿ ನಿತ್ಯ ಹಸುವಿನ ಹಾಲು ಕುಡಿಯೋಣ ಎಂದರು.

ವಿಜಯಲಕ್ಷ್ಮೀಯವರ ಅಬಲಾಶ್ರಮಕ್ಕೆ ಆರ್.ಟಿ.ಪಾಟೀಲ ಅವರು ಒಂದು ಲಕ್ಷ ರೂ.ದೇಣಿಗೆ ನೀಡಿದರು. ಶಾಲಾ ಕಾಲೇಜು ಒಕ್ಕೂಟಗಳ ಅಧ್ಯಕ್ಷ ಆರ್. ಟಿ. ಪಾಟೀಲ ಅಧ್ಯಕ್ಷತೆ ವಹಿಸಿದ್ದರು.

ಗ್ರಾಪಂ ಅಧ್ಯಕ್ಷೆ ಪಾರ್ವತಿ ತೇಲಿ, ಅಪ್ಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಎಸ್.ಪಿ. ಪ್ರಸನ್ನಕುಮಾರ ದೇಸಾಯಿ, ಜಿಪಂ ಉಪಕಾರ್ಯದರ್ಶಿ ಎನ್. ವೈ. ಬಸರಿಗಿಡದ, ಜಿಲ್ಲಾ ಆಯುಷ್ ಅಧಿಕಾರಿ ಶೇಖರಯ್ಯ ಮಠ, ಜಿಲ್ಲಾ ಅಲ್ಪಸಂಖ್ಯಾತ ಕಲ್ಯಾಣಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ, ಎ.ಸಿ. ಶ್ವೇತಾ ಬೀಡಿಕರ, ಆಹಾರ ಇಲಾಖೆ ಜಿಲ್ಲಾ ಉಪನಿರ್ದೇಶಕ ಶ್ರೀಶೈಲ ಕಂಕಣವಾಡಿ, ಜಿಪಂ ಅಧಿಕಾರಿ ಉಕ್ಕಲಿ, ಡಿವೈಎಸ್ಪಿ ಸೈಯದ್ ಜಮೀರ್ ರೋಷನ್, ತಹಶೀಲ್ದಾರರಾದ ಮಹಾದೇವ ಸಣಮುರಿ, ಸದಾಶಿವ ಮಕ್ಕೋಜಿ, ತಾಪಂ ಇಒ ಉಮೇಶ ಸಿದ್ನಾಳ, ಸಮಾಜ ಕಲ್ಯಾಣ ಸಹಾಯಕ ನಿರ್ದೇಶಕ ಮೋಹನ ಕೋರಡ್ಡಿ, ಸಿಪಿಐ ಮಹಾದೇವ ಶಿರಹಟ್ಟಿ, ಬಿಇಒ ಎಸ್. ಎಂ.ಮುಲ್ಲಾ, ಪ್ರತ್ರಕರ್ತ ನಾರಾಯಣಗೌಡ ಉತ್ತಂಗಿ, ಅಶೋಕ ಕಿವುಡಿ, ಡಾ.ಶಿವಾನಂದ ಕುಬಸದ, ರಮೇಶ ನಿಡೋಣಿ ಸೇರಿದಂತೆ ಇನ್ನೂ ಹಲವರು ಭಾಗವಹಿಸಿದ್ದರು.

ಶಿಕ್ಷಕ ಎನ್.ಎಸ್.ನಾಗ್ವೇಕರ್ ಮತ್ತು ರಾಘವೇಂದ್ರ ನೀಲನ್ನವರ ಯೋಗ ಮಾರ್ಗದರ್ಶನ ನೀಡಿದರು. ಒಕ್ಕೂಟಗಳ ಪ್ರಧಾನ ಕಾರ್ಯದರ್ಶಿ ಶ್ರೀಶೈಲ ಹುನ್ನೂರ ನಿರೂಪಿಸಿದರು.

# ನಕಲಿ ಬಿತ್ತನೆ ಬೀಜ, ರಸಗೊಬ್ಬರ ಮಾರಾಟ ವಿರುದ್ಧ ಕ್ರಮ

**ಬಾಗಲಕೋಟೆ :** ಜಿಲ್ಲೆಯಲ್ಲಿ ಮೇಲಿಂದ ಮೇಲೆ ಮಳೆಯಾಗುತ್ತಿರುವುದ–ರಿಂದ ಮತ್ತು ಬೆಳೆಯು ಬೆಳೆವಣಿಗೆಯ ಹಂತದಲ್ಲಿ ಪ್ರಮುಖ ಪೋಷಕಾಂಶಗಳ ಕೊರತೆಯಿಂದಾಗಿ ಹಳದಿ ರೂಪಕ್ಕೆ ತಿರುಗಿದಾಗ ನ್ಯಾನೊ ಯೂರಿಯಾ ಮತ್ತು ನ್ಯಾನೊ ಡಿ.ಎ.ಪಿ ಬಳಸಿ ಎಲೆಗಳ ಮೂಲಕ ಸಿಂಪಡಣೆ ಮಾಡಿ ಅಗತ್ಯ ಪೋಷಕಾಂಶಗಳನ್ನು ಕಡಿಮೆ ಖರ್ಚಿನಲ್ಲಿ ಪೂರೈಸಿದಂತಾಗುತ್ತದೆ.

ಜಿಲ್ಲೆಯಲ್ಲಿ ಪ್ರಸ್ತುತ ಯೂರಿಯಾ 14,540 ಮೇ ಟನ್, ಡಿ.ಎ.ಪಿ 2465 ಮೇ.ಟನ್ ಕಾಂಪ್ಲೇಕ್ಸ, 17.159 ಮೇ.ಟನ್, ಎಮ್.ಓ.ಪಿ 3400 ಮೇ.ಟನ್ ಹಾಗೂ ಎಸ್.ಎಸ್.ಪಿ 1668 ಮೇ.ಟನ್ ದಾಸ್ತಾನು ಇದ್ದು, ಜಿಲ್ಲೆಯಲ್ಲಿ ಯಾವುದೇ ರಸಗೊಬ್ಬರದ ಕೊರತೆ ಇರುವುದಿಲ್ಲ. ರೈತ ಬಾಂಧವರು ತಮ್ಮ ಅವಶ್ಯಕತೆಗನುಗುಣವಾಗಿ ರಸಗೊಬ್ಬರವನ್ನು ಖರೀದಿಸಬಹುದಾಗಿದೆ.

ರೈತರು ಬಿತ್ತನೆ ಬೀಜ ಮತ್ತು ರಸಗೊಬ್ಬರವನ್ನು ಅಧಿಕೃತ ಮಾರಾಟಗಾರ–ರಿಂದ ಮಾತ್ರ ಖರೀದಿಸಲು ಕೋರುತ್ತಾ, ಖರೀದಿಸಿದ ಕೃಷಿ ಪರಿಕರಗಳಿಗೆ ರಶೀಧಿಯನ್ನು ಪಡೆದು ತಮ್ಮ ಹತ್ತಿರ ಇಟ್ಟುಕೊಳ್ಳಬೇಕು. ಕಾನೂನುಬಾಹಿರ ಮತ್ತು ನಕಲಿ ಬಿತ್ತನೆ ಬೀಜ ಅಥವಾ ರಸಗೊಬ್ಬರ ಮಾರಾಟ ಕಂಡುಬಂದಲ್ಲಿ ಈ ಕೆಳಕಂಡಂತೆ ಅಧಿಕಾರಿಗಳನ್ನು ಸಂಪರ್ಕಿಸಲು ಕೋರಲಾಗಿದೆ. ಮಾಹಿತಿ ನೀಡುವವರ ವಿವರವನ್ನು ಗೌಪ್ಯವಾಗಿಡಲಾಗುತ್ತದೆ.

ದೂರುಗಳನ್ನು ಬಾಗಲಕೋಟೆ ತಾಲ್ಲೂಕು (8277933527, 8277933528), ಬಾದಾಮಿ ತಾಲ್ಲೂಕು (8277933508), ಹುನಗುಂದ ತಾಲ್ಲೂಕು (8277933504, 8277933556), ಬೀಳಗಿ ತಾಲ್ಲೂಕು (8277933507), ಮುಧೋಳ ತಾಲ್ಲೂಕು (8277933586, 8277933551), ಜಮಖಂಡಿ ತಾಲ್ಲೂಕು (8277933569, 8277933583) ಮೊಬೈಲ್ ಸಂಖ್ಯೆಗಳಿಗೆ ಕರೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಕೃಷಿ ಇಲಾಖೆಯ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯ ರಕ್ಷಣೆಗೆ ಯೋಗದ ಮಹತ್ವತೆ ಬಗ್ಗೆ ಅರಿವು ಮೂಡಿಸಿ

**ಜಮಖಂಡಿ :** ಇಲ್ಲಿಯ ಸರಕಾರಿ ಪ್ರಥ–ಮ ದರ್ಜೆ ಮಹಿಳಾ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರದಲ್ಲಿ ಎನ್. ಎಸ್.ಎಸ್., ರೆಡ್ಕ್ರಾಸ್, ಕ್ರೀಡಾ ಹಾಗೂ ಐ.ಕ್ಯೂ.ಎ.ಸಿ. ವಿಭಾಗಗಳ ಸಂಂ–ಯೋಗದಲ್ಲಿ 'ಅಂತರ್ ರಾಷ್ಟ್ರೀಯ ಯೋಗ ದಿನಾಚರಣೆ'ಯನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಡಾ. ಪ್ರೀತಿ ನ್ಯಾಮಗೌಡ, ಬಿ.ಎ.ಎಮ್.ಎಸ್., ಎಮ್.ಡಿ. ಯೋಗ ಆಯುರ್ವೇದ ಇವರು ಆಗಮಿಸಿದ್ದರು. ವಿದ್ಯಾರ್ಥಿನಿಯರಿಗೆ ಯೋಗಾ ಮಾಡಿಸುವುದರ ಜೊತೆಗೆ "ಜಗತ್ತಿಗೆ ಭಾರತ ನೀಡಿದ ಉನ್ನತ ಕೊಡುಗೆಯೆಂದರೆ ಅದು ಯೋಗ.

ಮನಸ್ಸು ಮತ್ತು ದೇಹವನ್ನು ಸಂಪರ್ಕಿಸುವ ಮತ್ತು ಇವೆರಡನ್ನೂ ಸಮತೋಲನದಲ್ಲಿ–ರಿಸುವ ಪ್ರಾಚೀನ ಕಲೆಯೇ ಯೋಗ. ಪ್ರತಿನಿತ್ಯ ಯೋಗಾಭ್ಯಾಸಗಳನ್ನು ಮಾಡುವವನಿಗೆ ಯಾವುದೇ ದೈಹಿಕ ಕಾಯಿಲೆಗಳು ಬಾಧಿಸುವುದಿಲ್ಲ ಎನ್ನುವುದು ಎಷ್ಟು ಸತ್ಯವೋ, ಮಾನಸಿಕ ಆರೋಗ್ಯ ಕೂಡಾ ಸ್ಥಿರವಾಗಿರುತ್ತದೆ ಎಂಬುದು ಕೂಡ ಅಷ್ಟೇ ಸತ್ಯ. ಇದನ್ನು ಇಡೀ ಜಗತ್ತೇ ಒಪ್ಪಿಕೊಂಡಿದೆ. ಪ್ರತಿ ವರ್ಷವೂ ಯೋಗ ದಿನವನ್ನು ಒಂದು ಥೀಮ್ ಅಥವಾ ವಿಷಯದ ಮೇಲೆ ಆಚ–ರಿಸಲಾಗುತ್ತದೆ. ಅದೇ ಪ್ರಕಾರ, 2025 ರ



ಅಂತಾರಾಷ್ಟ್ರೀಯ ಯೋಗ ದಿನದ ಥೀಮ್ 'ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ ಎಂದಾಗಿದೆ. ಯೋಗವು ದೈಹಿಕ ಆರೋಗ್ಯ ಮಾತ್ರವಲ್ಲದೆ, ಮಾನಸಿಕ ಆರೋಗ್ಯಕ್ಕೂ ಮದ್ದು. ಪ್ರಾಣಾಯಾಮ, ಸೂರ್ಯ ನಮಸ್ಕಾರ, ಧ್ಯಾನ ಹಾಗೂ ಸರಳ ಆಸನಗಳನ್ನು ಮಾಡುವುದರ ಮೂಲಕ ದೇಹ ಹಾಗೂ ಮಾನಸಿಕ ಆರೋಗ್ಯವನ್ನು ವೃದ್ಧಿಸಬಹುದು. ಕೋಪ, ಏಕಾಗ್ರತೆಯ ಕೊರತೆ, ಒತ್ತಡ ಈ ರೀತಿಯ ಮಾನಸಿಕ ಸಮಸ್ಯೆಗಳಿಗೆ ದಿನನಿತ್ಯ ಯೋಗ ಮಾಡುವ ಮೂಲಕ ಪರಿಹಾರ ಕಂಡು ಕೊಳ್ಳಬಹುದು. ಯೋಗವು ಕೇವಲ ಶಾರೀರಿಕ ವ್ಯಾಯಾಮವಲ್ಲ. ಇದು ದೇಹ, ಮನಸ್ಸು ಮತ್ತು ಆತ್ಮದ ಸಮತೋಲನ ಸಾಧಿಸುವ ಒಂದು ಜೀವನ ಶೈಲಿಯಾಗಿದೆ. ಯೋಗವನ್ನು ನಾವೆಲ್ಲೆಡೆ – ಕುರ್ಚಿ, ಮ್ಯಾಟ್ ಅಥವಾ ಸೋಫಾದ ಮೇಲೆಯೂ ಸಹ ಅಭ್ಯಾಸ ಮಾಡಬಹುದು. ಯೋಗ ನಮ್ಮ ಹೃದಯ ಹಾಗೂ ಮನಸ್ಸನ್ನು ಶಾಂತಗೊಳಿಸಿ ನಿಯಂತ್ರಣದಲ್ಲಿಟ್ಟು ಕೊಳ್ಳುತ್ತದೆ. ಯೋಗದ ಅಷ್ಟಾಂಗಗಳಲ್ಲಿ "ಯಮ" ಮತ್ತು "ನಿಯಮ" ಪ್ರಮುಖವಾಗಿವೆ. ಯಮಗಳು ಯಾವ ನಕಾರಾತ್ಮಕ ಕಾರ್ಯಗಳನ್ನು ಮಾಡಬಾರದು ಎಂಬುದನ್ನು ತಿಳಿಸುತ್ತವೆ. ಹೀಗೆಯೆ ನಿಯಮಗಳು ಯಾವ ಧನಾತ್ಮಕ ನಡವಳಿಕೆಯನ್ನು ಪಾಲಿಸಬೇಕು ಎಂಬುದನ್ನು ವಿವ–ರಿಸುತ್ತವೆ. ವಿದ್ಯಾರ್ಥಿ ಜೀವನದಿಂದಲೇ ನಿತ್ಯ ಯೋಗಾಸನಗಳನ್ನು ಅಭ್ಯಾಸ ಮಾಡಿದರೆ, ದೇಹ ಹಾಗೂ ಮನಸ್ಸು ನಮ್ಮ ಹಿಡಿತದಲ್ಲಿರುತ್ತದೆ. ಹೀಗಾಗಿ ಪ್ರತಿಯೊಬ್ಬರು ನಿತ್ಯ ಯೋಗ ಹಾಗೂ ಪ್ರಾಣಾಯಾಮ ಅಭ್ಯಾಸ ಮಾಡಬೇಕು ಎಂದು ಹೇಳುವುದರ ಮೂಲಕ ಯೋಗದ ಮಹತ್ವದ ಬಗ್ಗೆ ಹೇಳಿದರು. ವಿಶೇಷವಾಗಿ ಮಹಿಳೆಯರ ಆರೋಗ್ಯ ರಕ್ಷಣೆಯಲ್ಲಿ ಯೋಗಾಸನವು ಹೇಗೆ ಅನುಕೂಲಕರ ಎಂಬುದನ್ನು ಪ್ರಾತ್ಯಕ್ಷಿಕೆ ನೀಡುವ ಮೂಲಕ ವಿದ್ಯಾರ್ಥಿನಿಯರಿಗೆ ಯೋಗದ ಮಹತ್ವವನ್ನು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಚಾರ್ಯೆ ಡಾ. ಸುನಂದಾ ಎಸ್. ಶಿರೂರ ಅವರು ಮಾತನಾಡುತ್ತಾ "ಪ್ರಪಂಚದಾದ್ಯಂತ ಪ್ರತಿ ವರ್ಷ ಜೂನ್ 21 ರಂದು ಅಂತರಾಷ್ಟ್ರೀಯ ಯೋಗ ದಿನವನ್ನಾಗಿ ಆಚರಿಸಲಾಗುತ್ತದೆ. ಈ ದಿನವು ವರ್ಷದ ಸುದೀರ್ಘ ದಿನವಾಗಿದೆ ಮತ್ತು ಯೋಗವು ಮನುಷ್ಯನಿಗೆ ದೀರ್ಘಾಯುಷ್ಯವನ್ನು ನೀಡುತ್ತದೆ. ಸಾಮಾನ್ಯವಾಗಿ ಯೋಗದ ಪ್ರಯೋಜನಗಳ ಬಗ್ಗೆ ಜನರಿಗೆ ಅರಿವು ಮೂಡಿಸಲು ಯೋಗ ದಿನವನ್ನು ಆಚ–ರಿಸಲಾಗುತ್ತದೆ. ಮೊದಲ ಅಂತರಾಷ್ಟ್ರೀಯ ಯೋಗ ದಿನವನ್ನು 21 ಜೂನ್ 2015 ರಂದು ಆಚರಿಸಲಾಯಿತು. ಭಾರತದಲ್ಲಿ ಪ್ರಾಚೀನ ಕಾಲದಿಂದಲೂ ಯೋಗ ಮಾಡುವ ಸಂಪ್ರದಾಯ ನಡೆದುಕೊಂಡು ಬಂದಿದೆ. ಯೋಗವು ಒತ್ತಡ ಮತ್ತು ಆತಂಕವನ್ನು ಕಡಿಮೆ ಮಾಡುತ್ತದೆ. ಯೋಗವು ದೇಹದಲ್ಲಿ ಔಷಧಿಯಂತೆ ಕೆಲಸ ಮಾಡುತ್ತದೆ. ಇದು ನಮ್ಮ ದೇಹದ ಅಂಗಾಂಗಗಳು ಕಾರ್ಯನಿರ್ವಹಿಸುವ ವಿಧಾನವನ್ನು ನಿಯಂತ್ರಿಸುವ ಮೂಲಕ ನಮ್ಮ ದೇಹದ ವಿವಿಧ ರೋಗಗಳನ್ನು ಕ್ರಮೇಣ ಗುಣಪಡಿಸುತ್ತದೆ. ಮಕ್ಕಳ ಮಾನಸಿಕ, ದೈಹಿಕ ಮತ್ತು ಭಾವನಾತ್ಮಕ ಬೆಳವಣಿಗೆಗೆ ಯೋಗವು ಪ್ರಯೋಜನಕಾ–ರಿಯಾಗಿದೆ. ಸದಾ ಆರೋಗ್ಯವಾಗಿರಲು ಯೋಗ ಮಾಡುವುದು ಬಹಳ ಮುಖ್ಯ. ಯೋಗ ಮಾಡುವುದರಿಂದ ದೇಹದ ರೋಗ ನಿರೋಧಕ ಶಕ್ತಿ ಹೆಚ್ಚುತ್ತದೆ. ಇದು ಎಲ್ಲಾ ರೀತಿಯ ರೋಗಗಳ ವಿರುದ್ಧ ಹೋರಾಡಲು ನಮ್ಮ ದೇಹವನ್ನು ಶಕ್ತಗೊಳಿಸುತ್ತದೆ. ಆದ್ದರಿಂದ ಯೋಗ ಮಾಡುವುದು ನಮ್ಮೆಲ್ಲರ ಆರೋಗ್ಯಕ್ಕೆ ಬಹಳ ಮುಖ್ಯ.

ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಲು ನಾವೆಲ್ಲರೂ ಪ್ರತಿದಿನ ಯೋಗ ಮಾಡಬೇಕು' ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ. ವಿ. ಆರ್. ದಳವಾಯಿ, ಡಾ. ಎಮ್. ಎಮ್. ಮಂಟೂರ, ಡಾ. ವೈ. ವೈ. ಕೊಕ್ಕನವರ, ಎಸ್. ಕೆ. ಡೇಂಬರೆ, ಡಾ. ಎ. ವಾಯ್. ಕಾಂಬಳೆ, ಆರ್. ಎಸ್. ಜಾಧವ, ಡಾ. ಡಿ. ಬಿ. ಚೆನ್ನಪ್ಪಗೋಳ, ಡಾ. ಜಯಮ್ಮ, ಪ್ರಭುಗೌಡ ಚಾಂದಕವಟೆ, ವೆಂಕಟೇಶ ಕುಲಕರ್ಣಿ ಹಾಗೂ ಇನ್ನೂ ಅನೇಕರು ಉಪಸ್ಥಿತರಿದ್ದರು.

# ಯೋಗ ದಿನನಿತ್ಯದ ರೂಢಿಯಾಗಲಿ



**ಬನಹಟ್ಟಿ :** ಇಂದಿನ ಒತ್ತಡದ ಜೀವನದಲ್ಲಿ ಮನಸ್ಸಿನ ಶಾಂತಿಗಾಗಿ ಯೋಗ ಅಗತ್ಯವಾಗಿದೆ.

ಪ್ರತಿಯೊಬ್ಬರು ಯೋಗವನ್ನು ತಮ್ಮ ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಯೋಗದಿಂದ ಉತ್ತಮ ಆರೋಗ್ಯವನ್ನು ಪಡೆದುಕೊಳ್ಳಬಹುದಾಗಿದೆ ಎಂದು ರಬಕವಿ ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ ತಿಳಿಸಿದರು.

ಅವರು ಶನಿವಾರ ಇಲ್ಲಿನ ಎಸ್. ಆರ್. ಎ. ಹೈಸ್ಕೂಲ್ ಮೈದಾನದಲ್ಲಿ ನಡೆದ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಯೋಗ ಗುರು ಡಾ. ಪರಶುರಾಮ ರಾವಳ ಮಾತನಾಡಿ, ಈ ಬಾರಿ ನಾವೆಲ್ಲರೂ ಪ್ರಕೃತಿಯೊಂದಿಗೆ ಯೋಗ ದಿನವನ್ನು ಆಚರಣೆ ಮಾಡಬೇಕು.

ಪ್ರತಿಯೊಬ್ಬರು ಒಂದೊಂದು ಸಸಿಯನ್ನು ನೆಟ್ಟು, ಅದನ್ನು ಉಳಿಸಿ ಬೆಳೆಸಿಕೊಳ್ಳಬೇಕು. ಉತ್ತಮ ಪರಿಸರದಿಂದ ಮತ್ತು ಯೋಗದಿಂದ ಮನಸ್ಸು ಮತ್ತು ಶರೀರ ಶುದ್ಧವಾಗುತ್ತದೆ. ವಿದ್ಯಾರ್ಥಿಗಳು ಈಗಿನಿಂದಲೇ ಯೋಗವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಮುಂದಿನ ದಿನಗಳಲ್ಲಿ ಉತ್ತಮ ಫಲಿತಾಂಶ ಪಡೆದು ಕೊಳ್ಳಬಹುದಾಗಿದೆ ಎಂದರು.

ತೇರದಾಳ ತಹಶೀಲ್ದಾರ್ ವಿಜಯಕುಮಾರ ಕಡಕೋಳ, ಪ್ರಭಾರ ಮುಖ್ಯ ಶಿಕ್ಷಕ ಎಚ್. ಬಿ. ನದಾಫ್, ದೈಹಿಕ ಶಿಕ್ಷಕರಾದ ಬಿ. ಜೆ. ಜೋರಾಪುರ, ಎಂ. ಬಿ. ಶೆಟ್ಟಿ, ಜಿ. ಎಸ್. ಪಾಟೀಲ, , ಗ್ರಾಮ ಲೆಕ್ಕಾಧಿಕಾರಿ ಸದಾಶಿವ ಕುಂಬಾರ, ಎಂ. ಪಿ. ಧೂಪದಾಳ, ಎಚ್. ವೈ. ಆಲಮೇಲ, ರಾಜು ಉಕ್ಕಲಿ ಸೇರಿದಂತೆ ಇನ್ನೂ ಅನೇಕರು ಭಾಗವಹಿಸಿದ್ದರು.

# ಯೋಗದಿಂದ ಸ್ವಾಸ್ಥ್ಯ ಸಮಾಜ ನಿರ್ಮಾಣ ಸಾಧ್ಯ



**ಬನಹಟ್ಟಿ :** ಯೋಗ ಇಂದು ವಿಶ್ವ ಮಾನ್ಯತೆಯನ್ನು ಪಡೆದುಕೊಂಡಿದೆ. ಯೋಗ ಗುರು ರಾಮದೇವ ಬಾಬಾ ಮತ್ತು ಪ್ರಧಾನಿ ನರೇಂದ್ರ ಮೋದಿ ಯೋಗಕ್ಕೆ ವಿಶ್ವ ಮಾನ್ಯತೆ ತಂದು ಕೊಡುವಲ್ಲಿ ಪ್ರಮುಖ ಪಾತ್ರ ವಹಿಸಿದರು ಎಂದು ಯೋಗ ಗುರು ಡಾ. ಪರಶುರಾಮ ರಾವಳ ತಿಳಿಸಿದರು.

ಶನಿವಾರ ಸಮೀಪದ ಜಗದಾಳ ರಸ್ತೆಯ ಸುಶೀಲಾದೇವಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾಲಯದಲ್ಲಿ ತೇರದಾಳ ಮತಕ್ಷೇತ್ರದ ಬಿಜೆಪಿ ಪಕ್ಷದ ವತಿಯಿಂದ ಹಮ್ಮಿಕೊಳ್ಳಲಾದ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಾಮಾಜಿಕ ಕಾರ್ಯಕರ್ತ ಶಿವಾನಂದ ಗಾಯಕವಾಡ, ಯೋಗದಿಂದ ವ್ಯಕ್ತಿಯ ಜೀವನಕ್ಕೆ ಮಹತ್ವ ಬರುತ್ತದೆ. ಯೋಗದಿಂದ ಸದೃಢವಾದ ಸಮಾಜವನ್ನು ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ವಿನಾಯಕ ತಾಂಬಟ, ಶ್ರೀಶೈಲ ಬೀಳಗಿ, ಶ್ರೀಶೈಲ ಯಾದವಾಡ, ರಾಮಣ್ಣ ಭದ್ರನ್ನವರ, ಡಾ. ಶಂಕರ ವಸ್ತ್ರದ, ಆನಂದ ಕಂಪು, ಈರಣ್ಣ ಚಿಂಚಖಂಡಿ, ಅಶೋಕ ರಾವಳ, ರವಿ ಕೊರ್ತಿ, ಈಶ್ವರ ಕಾಡದೇವರ, ಬಾಬಾಗೌಡ ಪಾಟೀಲ, ಶ್ರೀನಿವಾಸ ಹಳ್ಯಾಳ, ಈಶ್ವರ ಪಾಟೀಲ, ಚಂದ್ರಶೇಖರ ಮಿರ್ಜಿ, ಅರುಣ ಬುದ್ನಿ, ಸುನೀಲ ಬಾಣಕಾರ, ವರ್ಧಮಾನ ಕೋರಿ, ಪಾಂಡುರಂಗ ಸಾಲ್ಗುಡೆ ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

# ಕುರುಹಿನಶೆಟ್ಟಿ ಜಗದ್ಗುರುಗಳಿಂದ ಮಕ್ಕಳಿಗೆ ಯೋಗಾಭ್ಯಾಸ



**ತೇರದಾಳ :** ವಿಶ್ವ ಯೋಗ ದಿನದ ನಿಮಿತ್ಯ ಇಲ್ಲಿನ ರಬಕವಿ ರಸ್ತೆಯ ಕುರುಹಿನಶೆಟ್ಟಿ ನೀಲಕಂಠೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಯೋಗ ದಿನಾಚರಣೆ ಆಚ–ರಿಸಲಾಯಿತು. ಸಂಸ್ಥೆಯ ಹಾಗೂ ಸಮಾಜದ ಜಗದ್ಗುರು ಶಿವಶಂಕರ ಶಿವಾಚಾರ್ಯರು ತಾವೇ ಯೋಗ ಮಾಡುವ ಮೂಲಕ ವಿದ್ಯಾರ್ಥಿಗಳಿಗೆ ಯೋಗಾಭ್ಯಾಸ ಮಾಡಿಸಿದರು.

ಏಕಪಾದ ಪಶ್ಚಿಮೂರ್ತಾಸನ, ದ್ವಿಪಾದ ಪಶ್ಚಿಮೂರ್ತಾಸನ, ಚಕ್ರಾಸನ, ಧನುರಾಸನ, ಬಕಾಸನ, ಹನುಮಾನ ಬೈಠಕ್, ಸರ್ವಾಂಗಾಸನ, ತಾಡಾಸನ, ವೃಕ್ಷಾಸನ, ಗರುಡಾಸನ, ನಟರಾಜಾಸನ, ಹನುಮಾನ ನಮಸ್ಕಾರ, ಸೂರ್ಯ ನಮಸ್ಕಾರ ಸೇರಿದಂತೆ ವಿವಿಧ ಬಗೆಯ ಯೋಗಾಸನಗಳನ್ನು ಶ್ರೀಗಳು ಮಾಡುವ ಮೂಲಕ ಮಕ್ಕಳನ್ನು ಹುರುದುಂಬಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಗದ್ಗುರು ಶಿವಶಂಕರ ಶಿವಾಚಾರ್ಯರು, ಯೋಗಾಸನ ಭಾರತ ದೇಶದ ಸಂಸ್ಕೃತಿಯಾಗಿದೆ.

ಯೋಗದ ಮಹತ್ವವನ್ನು ಜಗತ್ತಿಗೆ ಸಾರಿದ ಕೀರ್ತಿ ಭಾರತ ದೇಶದ್ದು ಎಂದು ಹೇಳಲು ಹೆಮ್ಮೆ ಎನಿಸುತ್ತದೆ. ಆದ್ದರಿಂದ ಯೋಗವನ್ನು ಒಂದು ದಿನಕ್ಕೆ ಮಾತ್ರ ಸೀಮಿತಗೊಳಿಸದೇ ಪ್ರತಿದಿನ ಯೋಗ ಮಾಡುವ ಪ್ರವೃತ್ತಿ ರೂಢಿಸಿಕೊಳ್ಳಬೇಕೆಂದು ಸಲಹೆ ನೀಡಿದರು. ಆಡಳಿತ ಮಂಡಳಿಯವರು, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ಭ್ರಮೆಯಿಂದ ವಾಸ್ತವದೆಡೆಗೆ ಸಾಗಲು ಯೋಗ ಅತ್ಯಗತ್ಯ: ಪ್ರೊ. ಕಂದಗಲ್

**ಜಮಖಂಡಿ :** ಅಜ್ಞಾನದಿಂದ ಸುಜ್ಞಾನದೆಡೆಗೆ, ಜ್ಞಾನದಿಂದ ವಿಜ್ಞಾನದೆಡೆಗೆ, ಭ್ರಮೆಯಿಂದ ವಾಸ್ತವದೆಡೆಗೆ, ಬೇಸರದಿಂದ ಉತ್ಸಾಹದೆಡೆಗೆ, ರಾಗ–ದ್ವೇಷದಿಂದ ಪ್ರೀತಿ–ವಿಶ್ವಾಸದೆಡೆಗೆ ಸಾಗಲು ಯೋಗ ಅಗತ್ಯವಾಗಿದೆ ಎಂದು ನಿವೃತ್ತ ಪ್ರಾಧ್ಯಾಪಕ, ಯೋಗಪಟು ಪ್ರೊ. ಎ. ಎಸ್. ಕಂದಗಲ್ ಹೇಳಿದರು.

ವಿಶ್ವ ಯೋಗ ದಿನಾಚರಣೆ ಅಂಗವಾಗಿ ಸ್ಥಳೀಯ ಬಸವಜ್ಯೋತಿ ಶಿಕ್ಷಣ ಸಮೂಹ ಸಂಸ್ಥೆಗಳ ಅಶ್ರಯದಲ್ಲಿ ಶನಿವಾರ ಆಯೋಜಿಸಿದ್ದ ಸಾಮೂಹಿಕ ಯೋಗ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಹಾಗೂ ಯೋಗ ಪ್ರಾತ್ಯಕ್ಷಿಕೆ ನೀಡಿ ಅವರು ಮಾತನಾಡಿದರು.

ಕಾಮ, ಕ್ರೋಧ, ಲೋಭ, ಮೋಹ, ಮದ ಮತ್ತು ಮತ್ಸರ ಈ ಅರಿಷಡ್ವರ್ಗಗಳಿಂದ ದೂರ ಉಳಿಯಲು ಯೋಗ ಒಂದು ಸಾಧನವಾಗಿದೆ. ಯೋಗ ಮಾಡಿ ನಿರೋಗಿಯಾಗಿ, ಯೋಗದೆಡೆಗಿನ ಒಂದು



ಹೆಜ್ಜೆ ಆರೋಗ್ಯದೆಡೆಗೆ. ಯೋಗದಿಂದ ಶಾಂತಿ, ಸಮಾಧಾನ ಗಳಿಸಲು ಮತ್ತು ಏಕತೆ, ಒಗ್ಗಟ್ಟು ಸಾಧಿಸಲು ಸಾಧ್ಯ ಎಂದರು.

ಆಡಳಿತಾಧಿಕಾರಿ ಪ್ರೊ. ಬಸವರಾಜ ಕಡ್ಡಿ ಅಧ್ಯಕ್ಷತೆ ವಹಿಸಿ ಮಾತನಾಡಿ, ದೈಹಿಕ ಸಾಮರ್ಥ್ಯ, ಮಾನಸಿಕ ಜಾಗರೂಕತೆ ಮತ್ತು ಭಾವನಾತ್ಮಕ ಸ್ಥಿರತೆಗಾಗಿ ಪ್ರತಿನಿತ್ಯ ಯೋಗ ಮಾಡಬೇಕು. ಸೋಲು–ಗೆಲುವು, ಮಾನ–ಅಪಮಾನವನ್ನು ಸಮನಾಗಿ ಸ್ವೀಕರಿಸಿ ಸಮತೆಯಿಂದ ಇರಲು ಯೋಗ ಅಗತ್ಯವಿದೆ ಎಂದರು.

ಪ್ರಾಚಾರ್ಯ ಡಾ. ಟಿ. ಪಿ. ಗಿರಡ್ಡಿ ಮುಖ್ಯ ಅತಿಥಿಯಾಗಿ ಮಾತನಾಡಿ, ಉತ್ತಮ ಆರೋಗ್ಯಕ್ಕೆ ಯಾವುದೇ ಪರ್ಯಾಯವಿಲ್ಲ. ಆದ್ದರಿಂದ ದುಶ್ಚಟಗಳಿಂದ ದೂರವಿದ್ದು, ಒಳ್ಳೆಯ ಹವ್ಯಾಸ ರೂಢಿಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಸಂಸ್ಥೆಯ ಅಧ್ಯಕ್ಷ ಡಾ. ಗಿರೀಶ ಕಡ್ಡಿ, ಕಾರ್ಯದರ್ಶಿ ಶಕುಂತಲಾ ಕಡ್ಡಿ, ಮುಖ್ಯ ಶಿಕ್ಷಕ ಪಿ. ಐ. ಹೊಸಮಠ, ಉಪನ್ಯಾಸಕ ಪಿ. ಎನ್. ವಜ್ರಮಟ್ಟಿ, ಉಪನ್ಯಾಸಕ ಡಾ. ಎಂ. ಎನ್. ಕುಂಬಾರ, ದೈಹಿಕ ಶಿಕ್ಷಣ ಶಿಕ್ಷಕ ಮುತ್ತು ಅಮ್ಮಣಗಿ, ದೈಹಿಕ ಶಿಕ್ಷಣ ಶಿಕ್ಷಕಿ ವಂದನಾ ಜಂಬಗಿ, ಶಿಕ್ಷಕ–ಶಿಕ್ಷಕಿಯರು ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು.

ಸಾವಿರಾರು ಮಕ್ಕಳು ಸಾಮೂಹಿಕವಾಗಿ ಯೋಗ ಮಾಡಿದರು.

ವೈಭವ ನಾವಿ ಪ್ರಾರ್ಥನೆ ಗೀತೆ ಹಾಡಿದರು. ಶಿಕ್ಷಕಿ ಸನಾಬಾನಿ ಸ್ವಾಗತಿಸಿದರು. ವಿದ್ಯಾರ್ಥಿನಿ ಸಿಂಧು ಬಂಗಾರಿ ನಿರೂಪಿಸಿದರು. ಶಿಕ್ಷಕಿ ಲಕ್ಷ್ಮೀ ಗೋಲಪ ವಂದಿಸಿದರು.

# ಕರ್ನಾಟಕ ವಿಶ್ವವಿದ್ಯಾಲಯ ನೂತನ ಕುಲಸಚಿವರಿಗೆ ಸನ್ಮಾನ



**ಧಾರವಾಡ :** ನಗರದ ಕರ್ನಾಟಕ ವಿಶ್ವವಿದ್ಯಾಲಯದ ಆಡಳಿತ ವಿಭಾಗಕ್ಕೆ ಹೊಸದಾಗಿ ಕುಲಸಚಿವರಾಗಿ ಪ್ರೊ. ಅರವಿಂದ ಮೂಲಿಮನಿ ಅವರು ಅಧಿಕಾರ ಸ್ವೀಕರಿಸಿದರು.

ಕವಿವಿ ನೂತನ ಕುಲಸಚಿವ ಪ್ರೊ. ಅರವಿಂದ ಮೂಲಿಮನಿ ಅವರನ್ನು ಕರ್ನಾಟಕ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ರಾಬರ್ಟ್ ದದ್ದಾಪುರಿ, ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಮಹಾಂತೇಶ ಕಂಬಾರ, ನ್ಯಾಯವಾದಿ ಮಲ್ಲಿಕಾರ್ಜುನ ಕಾಂಬಳೆ ಸ್ವಾಗತಿಸಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಅನೇಕ ಗಣ್ಯರು ಉಪಸ್ಥಿತರಿದ್ದರು.

## ಜಿಲ್ಲಾಧಿಕಾರಿಗಳಿಂದ ವಿವಿಧ ಕಾಮಗಾರಿಗಳ ಪರಿಶೀಲನೆ



**ವಿಜಯಪುರ :** ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಶುಕ್ರವಾರ ನಗರದ ವಿವಿಧ ಕಾಮಗಾರಿಗಳ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬೆಳಿಗ್ಗೆ ನಗರದ ಕೇಂದ್ರ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ನಿಲ್ದಾಣದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಪ್ರಯಾಣಿಕರಿಗೆ ಅಗತ್ಯವಾದ ಮೂಲಭೂತಸೌಲಭ್ಯಗಳನ್ನುಕಲ್ಪಿಸಬೇಕು.ಯಾವುದೇ ಪ್ರಯಾಣಿಕರಿಗೆ ಅನಾನೂಕೂಲವಾಗದಂತೆ ಎಚ್ಚರಿಕೆ ವಹಿಸಬೇಕು. ನಿಲ್ದಾಣದಲ್ಲಿ ಪ್ರಯಾಣಿಕರಿಗಾಗಿ ಶುದ್ಧ ಕುಡಿಯುವ ನೀರು, ಸೂಕ್ತ ಶೌಚಾಲಯ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಬಸ್ ನಿಲ್ದಾಣದ ಆವರಣದಲ್ಲಿ ನಿರ್ಮಾಣವಾಗುತ್ತಿರುವ ಇಂದಿರಾ ಕ್ಯಾಂಟೀನ್ ಕಟ್ಟಡವನ್ನು ವೀಕ್ಷಿಸಿ ಪರಿಶೀಲನೆ ನಡೆಸಿದ ಅವರು, ಕ್ಯಾಂಟೀನ್ ಮುಂಭಾಗದಲ್ಲಿ ಸೂಕ್ತ ಪಾರ್ಕಿಂಗ್ ವ್ಯವಸ್ಥೆ, ಸೇರಿದಂತೆ ರಸ್ತೆ, ವಿವಿಧ ಕಾಮಗಾರಿ ಪರಿಶೀಲನೆ ಅಗತ್ಯ ಸಲಹೆ–ಸೂಚನೆ ನೀಡಿದರು. ನಗರದ ನವಬಾಗ ರಸ್ತೆ ಕಾಮಗಾ–ರಿಯನ್ನು ಪರಿಶೀಲಿಸಿದ ಅವರು, ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಸಾರ್ವಜನಿಕರ ಸಂಚಾರಕ್ಕೆ ಮುಕ್ತಗೊಳಿಸಬೇಕು. ನಗರದ ಲಲಿತ ಮಹಲ್ ಹೊಟೆಲ್ ಹತ್ತಿರದ ಕೋಟೆಗೋಡೆ ಪಕ್ಕದಲ್ಲಿ ಖಾಸಗಿ ಬಸ್‌ಗಳಿಗೆ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಸ್ಥಳ ಪರಿಶೀಲನೆ ನಡೆಸಿದ ಅವರು, ಈ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

ನಗರ ಕೇಂದ್ರ ಗ್ರಂಥಾಲಯಕ್ಕೆ ಭೇಟಿ ನೀಡಿ, ವಿದ್ಯಾರ್ಥಿಗಳಿಗೆ ಅನುಕೂಲಕ ಕಲ್ಪಿಸುವ ನಿಟ್ಟಿನಲ್ಲಿ ಸುಸಜ್ಜಿತ ವಾತಾವರಣ ನಿರ್ಮಾಣ, ಗ್ರಂಥ–ಾಲಯಕ್ಕಾಗಮಿಸುವ ವಿದ್ಯಾರ್ಥಿಗಳು, ಓದುಗರಿಗೆ ಮೂಲಭೂತಸೌಲಭ್ಯಇರುವಂತೆನೋಡಿಕೊಳ್ಳಬೇಕು ಎಂದು ಅವರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಸರ್ಕಾರದ ಸಾಧನೆ ಯೋಜನೆಗಳ ಮಾಹಿತಿ ವಸ್ತು ಪ್ರದರ್ಶನಕ್ಕೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಚಾಲನೆ

**ವಿಜಯಪುರ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ರಾಜ್ಯಸರ್ಕಾರದ ಎರಡು ವರ್ಷದ ಸಾಧನೆ ಹಾಗೂ ಸರ್ಕಾರದ ಯೋಜನೆಗಳ ಕುರಿತು ಜೂ. 20ರಿಂದ 26ರವರೆಗೆ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಆಯೋಜಿಸಿರುವ ಮಾಹಿತಿ ವಸ್ತು ಪ್ರದರ್ಶನ ಮಳಿಗೆಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಶುಕ್ರವಾರ ಚಾಲನೆ ನೀಡಿದರು.

ವಸ್ತು ಪ್ರದರ್ಶನ ಮಳಿಗೆಗಳಲ್ಲಿ ಅಳವಡಿಸಲಾದ ಸರ್ಕಾರದ ಯೋಜನೆಗಳಾದಗೃಹಲಕ್ಷ್ಮೀ,ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ, ಯುವನಿಧಿ ಯೋಜನೆಗಳ ಸಮಗ್ರಮಾಹಿತಿ,ಫಲಾನುಭವಿಗಳ ಅನಿಸಿಕೆ, ಸರ್ಕಾರವು ವಸತಿರಹಿತರಿಗೆಸೂರುಕಲ್ಪಿಸಿದ ಮಾಹಿತಿ, ಇಂದಿರಾ ಕ್ಯಾಂಟೀನ್, ಆರೋಗ್ಯ ಯೋಜನೆಗಳು ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳನ್ನೊಳಗೊಂಡ ಸಮಗ್ರ ಮಾಹಿತಿಯುಳ್ಳ ಫಲಕಗಳನ್ನು ಜಿಲ್ಲಾಧಿಕಾರಿಗಳು ವೀಕ್ಷಣೆ ಮಾಡಿದರು.

ಮುಖ್ಯಮಂತ್ರಿಗಳೊಂದಿಗೆ ಜಿಲ್ಲಾಧಿಕಾರಿ ಸೆಲ್ಫಿ : ವಸ್ತು ಪ್ರದರ್ಶನದಲ್ಲಿ ನಾಡಿನ ಜನರ ಬದುಕು ಬೆಳಗಿಸಿದ ಗ್ಯಾರಂಟಿ ಯೋಜನೆಗಳ ಸಮಗ್ರ ಮಾಹಿತಿ, ಯಶೋಗಾಥ–'ಯನ್ನೊಳಗೊಂಡ ಪುಸ್ತಕವನ್ನು ರಾಜ್ಯದ ಮುಖ್ಯಮಂತ್ರಿಗಳಿಂದ ಪಡೆಯುವಂತೆ ಬಿಂಬಿಸುವ ಸೆಲ್ಫಿ ತೆಗೆದುಕೊಂಡು ಜಿಲ್ಲಾಧಿಕಾರಿಗಳು ಎಲ್ಲರ ಗಮನ ಸೆಳೆದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳ ಲಾಭ ಪ್ರತಿಯೊಬ್ಬ ಅರ್ಹ ಫಲಾನುವಿಗಳಿಗೆ ದೊರಕಿಸುವ ನಿಟ್ಟಿನಲ್ಲಿ, ಗ್ಯಾರಂಟಿ ಯೋಜನೆಗಳು ಒಳಗೊಂಡಂತೆ



ಸರ್ಕಾರದ ಜನಪರ ಯೋಜನೆಗಳ, ಅಭಿವೃದ್ಧಿ–ಸಾಧನೆಗಳ ಬಗ್ಗೆ ಸಾರ್ವಜನಿಕ–ರಿಗೆ ಮಾಹಿತಿ ನೀಡಲು ಮಾಹಿತಿ ವಸ್ತು ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದ್ದು, ಬೆಳಿಗ್ಗೆ8ರಿಂದರಾತ್ರಿ8ರವರೆಗೆಸಾರ್ವಜನಿಕರ ವೀಕ್ಷಣೆಗೆ ಮುಕ್ತವಾಗಿರಿಸಲಾಗಿದೆ ಎಂದರು.

ಸರ್ಕಾರದ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆ ಜಿಲ್ಲೆಯಲ್ಲಿ ಪ್ರಾರಂಭವಾದಾಗಿನಿಂದ ದಿನಾಂಕ : 18–06–2025ರವರೆಗೆ 13,54,27,837 ಮಹಿಳೆಯರು ಪ್ರಯಾಣಿಸಿದ್ದು, ಇದಕ್ಕಾಗಿ 440.34 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿದೆ. ಪ್ರತಿ ಮನೆಗೆ ಗರಿಷ್ಠ 200 ಯೂನಿಟ್‌ವರೆಗೆಉಚಿತವಿದ್ಯುತ್‌ಸೌಕರ್ಯ ಒದಗಿಸುವ ಗೃಹಜ್ಯೋತಿ ಯೋಜನೆಯಡಿ ಈ ಯೋಜನೆ ಆರಂಭದಿಂದ ವಿಜಯಪುರ ಜಿಲ್ಲೆಯ ಫಲಾನುಭವಿಗಳು 435.43 ಮಿಲಿಯನ್ ಯೂನಿಟ್ ವಿದ್ಯುತ್ ಬಳಕೆ ಮಾಡಿದ್ದು, 391.75 ಕೋಟಿ ರೂ. ಸರ್ಕಾರದಿಂದ ಅನುದಾನ ಇಲಾಖೆಗೆ ಲಭ್ಯವಾಗಿದೆ. ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು 2000 ರೂ. ನೀಡುವ ಗೃಹಲಕ್ಷಿ ?ಮ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 1882.43 ಕೋಟಿ ರೂ. ಅನುದಾನವನ್ನುಕುಟುಂಬದಯಜಮಾನಿಗೆ ಖಾತೆಗೆ ಜಮೆ ಮಾಡಲಾಗಿದೆ. ಪ್ರಸಕ್ತ 2025–ರ ಫೆಬ್ರವರಿ ಹಾಗೂ ಮಾರ್ಚ್ ಮಾಹೆಯ 02 ಕಂತುಗಳ ಪಾವತಿ ಕಾರ್ಯ ಪ್ರಗತಿಯಲ್ಲಿದೆ. ವಿಜಯಪುರ ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯಡಿ ಡಿಸೆಂಬರ್ 2024ರ ವರೆಗೆ ಒಟ್ಟು 4,59,849 ಅರ್ಹ ಫಲಾನುಭವಿಗಳಿಗೆ 457.03 ಕೋಟಿ ರೂ. ಹಣವನ್ನು ಅವರ ಖಾತೆಗಳಿಗೆ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ. ಯುವ ನಿಧಿ ಯೋಜನೆಯಡಿ ಜಿಲ್ಲೆಯ 15794 ಅಭ್ಯರ್ಥಿಗಳು ನೊಂದಾಯಿಸಿಕೊಂಡಿದ್ದು, 19,48,23,000 ರೂ. ಪದವಿ ಅಭ್ಯರ್ಥಿಗಳಿಗೆ ಹಾಗೂ 12,28,500 ರೂ. ಡಿಪ್ಲೋಮಾ ಅಭ್ಯರ್ಥಿಗಳಿಗೆ ಸೇರಿದಂತೆ ಒಟ್ಟು 19,60,51,500 ರೂ. ಗಳನ್ನು ಡಿಬಿಟಿ ಮೂಲಕ ಹಣವನ್ನು ಜಮೆ ಮಾಡಲಾಗಿದೆ ಎಂದು ವಿವರಿಸಿದರು.

ಸರ್ಕಾರ ವಿವಿಧ ಸೌಲಭ್ಯಗಳನ್ನು ಕಲ್ಪಿಸುವ ಯೋಜನೆ–ಕಾರ್ಯಕ್ರಮಗಳ ಮಾಹಿತಿಯನ್ನು ಈ ವಸ್ತು ಪ್ರದರ್ಶನದಲ್ಲಿ ಪ್ರಚುರಪಡಿಸಲಾಗಿದ್ದು,ಹೆಚ್ಚಿನಸಂಖ್ಯೆಯಲ್ಲಿ ಸಾರ್ವಜನಿಕರು ವಸ್ತು ಪ್ರದರ್ಶನ ವೀಕ್ಷಿಸಿ, ಮಾಹಿತಿ ಪಡೆದುಕೊಂಡು ಸರ್ಕಾರದ ಯೋಜನೆಗಳ ಲಾಭ ಪಡೆಯುವಂತೆ ಅವರು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಕಟಣೆಗಳಾದ ವಾರ್ತಾ ಜನಪದ ಮಾಸಿಕ ಹಾಗೂ ವಿಜಯಪುರ ಜಿಲ್ಲೆಯ ಪಂಚನದಿಗಳ ಬೀಡಿನಲ್ಲಿ ಪಂಚ ಗ್ಯಾರಂಟಿ ಯೋಜನೆಗಳಯಶೋಗಾಥೆಪುಸ್ತಕಗಳನ್ನು ಸಾರ್ವಜನಿಕರಿಗೆ ವಿತರಿಸಲಾಯಿತು.

ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ, ವಾರ್ತಾಧಿಕಾರಿ ಅಮರೇಶ ದೊಡಮನಿ, ಕ್ರೀಡಾ ಇಲಾಖೆ ಅಧಿಕಾರಿ ರಾಜಶೇಖರ ಧೈವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಸಂತೋಷಭೋವಿ,ಕೆಕೆಆರ್‌ಟಿಸಿ ಸಹಾಯಕ ಸಂಚಾರ ವ್ಯವಸ್ಥಾಪಕ ಕೆ.ಕೆ. ಹುಗ್ಗೆನ್ನವರ, ವಾರ್ತಾ ಇಲಾಖೆಯ ಸುರೇಶ ಅಂಬಿಗೇರ, ಮಂಜುಳಾ ದುರಗನ್ನವರ, ಪ್ರಶಿಕ್ಷಣಾರ್ಥಿ ವಿದ್ಯಾಶ್ರೀ ಹೊಸಮನಿ, ಶಕ್ತಿ ಯೋಜನೆಯಡಿ ಫಲಾನುಭವಿಗಳಾದ ಬಬಲಾದ ಗ್ರಾಮದ ಒಡಲಧ್ವನಿ ಸದಸ್ಯರು ಸೇರಿದಂತೆ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

## ನಮ್ಮೂರ ಶಾಲೆಗೆ ನಮ್ಮ ಯುವ ಜನರು ಕಾರ್ಯಕ್ರಮ ಅನುಷ್ಠಾನ: ಶಾಲೆಗಳಿಂದ ಅರ್ಜಿ ಆಹ್ವಾನ

**ವಿಜಯಪುರ :** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪ್ರಸಕ್ತ 2024–25ನೇ ಸಾಲಿಗೆ ನಮ್ಮೂರ ಶಾಲೆಗೆ ನಮ್ಮ ಯುವ ಜನರು ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ಅರ್ಹ ಶಾಲೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಾನ್ಯತೆ ಪಡೆದ ಕ್ರೀಡಾ ಸಂಸ್ಥೆಗಳು ಆಯೋಜಿಸಿದ್ದ ತಾಲೂಕು, ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ತೋರಿರುವ ಕ್ರೀಡಾಪಟುಗಳನ್ನು ಹೊಂದಿರುವ ಒಂದು ಸರ್ಕಾರಿ ಶಾಲೆಯನ್ನು ಆಯ್ಕೆ ಮಾಡಿ ಆಯ್ಕೆಯಾದ ಶಾಲೆಗೆ 1 ಲಕ್ಷ ರೂ. ಅನುದಾನವನ್ನುನೀಡಲಾಗುತ್ತದೆ. ಈ ಒಂದು ಲಕ್ಷದಲ್ಲಿ 10 ಸಾವಿರ ಗಳನ್ನು ಆಯ್ಕೆಯಾದ ಶಾಲೆಯ ದೈಹಿಕ ಶಿಕ್ಷಕರಿಗೆ ಹಾಗೂ 90,000 ರೂ.ಗಳನ್ನು ಶಾಲೆಯ ಎಸ್.ಡಿ.ಎಂ.ಸಿಗೆ ಅಗತ್ಯ ಕ್ರೀಡಾ ಸಾಮಗ್ರಿಗಳನ್ನು ಖರೀದಿಸುವುದಾಗಿರುತ್ತದೆ.

ಆಸಕ್ತಅರ್ಹಸರ್ಕಾರಿಶಾಲೆಗಳುಜೂನ್26ರೊಳಗಾಗಿ ಅರ್ಜಿಯನ್ನು ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿದೇಶಕರ ಕಚೇರಿಗೆ ಸಲ್ಲಿಸಬೇಕು. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08352–251085 ಹಾಗೂ 7019008443ಗೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಚ್ಚುಕಟ್ಟಾಗಿ ಕ್ರೀಡಾಕೂಟ ಆಯೋಜನೆ ಮಾಡಿ: ಬಳೋಲಮಟ್ಟಿ

**ವಿಜಯಪುರ :** ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಮಕ್ಕಳಿಗೆ ಅಚ್ಚುಕಟ್ಟಾಗಿ ಕ್ರೀಡಾಕೂಟ ಆಯೋಜನೆ ಮಾಡಬೇಕು ಎಂದು ವಿಜಯಪುರ ಗ್ರಾಮೀಣ ವಲಯದ ಬಿಇಒ ಪ್ರಮೋದಿನಿ ಬಳೋಲಮಟ್ಟಿ ಹೇಳಿದರು.

ನಗರದ ಅಗಸ್ತ್ಯ ಫೌಂಡೇಶನದಲ್ಲಿ ಗುರುವಾರ ನಡೆದ 2025–26 ನೇ ಸಾಲಿನ ಕ್ರೀಡಾಕೂಟದ ಪೂರ್ವಭಾವಿ ಸಭೆಯಲ್ಲಿ ಅವರು ದೈಹಿಕ ಶಿಕ್ಷಣ ಶಿಕ್ಷಕರಿಗೆ ಸೂಚಿಸಿದರು.

ಈ ವರ್ಷದ ಕ್ರೀಡಾಕೂಟಗಳನ್ನು ಆಯೋಜನೆ ಮಾಡಿ ಮಕ್ಕಳು ಪಾಠದ ಜೊತೆ ಆಟದಲ್ಲೂ ಆಸಕ್ತಿ ಹೊಂದಬೇಕು. ಮಕ್ಕಳಿಗೆ ಕ್ರೀಡಾಕೂಟ ಏರ್ಪಡಿಸುವದರಿಂದ ದೈಹಿಕವಾಗಿ ಹಾಗೂ ಮಾನಸಿಕವಾಗಿ ಸಮರ್ಥರಾಗುವರು. ಮಕ್ಕಳು




ಸವಾರ್ಂಗೀಣ ಅಭಿವೃದ್ಧಿ ಹೊಂದಿ ನಾಯಕತ್ವಗುಣ, ಕ್ರೀಡಾ ಪ್ರತಿಭೆ, ಸ್ಪರ್ಧಾತ್ಮಕ ಮನೋಭಾವನೆ ಹಾಗೂ ಮನರಂಜನೆ ಹೊಂದುವರು ಎಂದು ಹೇಳಿದರು.

ಶಾಲೆಯಲ್ಲಿ ಶಿಸ್ತು, ಶುಚಿತ್ವ ಕಾಪಾಡುವದು, ಶಾಲೆಯ ಎಲ್ಲ ಸಹಪಠ್ಯ ಚಟುವಟಿಕೆಗಳ ಜೊತೆ ಬಿಸಿ ಊಟದ ಸಂಪೂರ್ಣ ಉಸ್ತುವಾರಿ ವಹಿಸುವುದು. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಸ್ಪಷ್ಟ ಓದು, ಶುದ್ಧ ಬರಹ, ಸರಳ ಲೆಕ್ಕಗಳನ್ನು ಬರುವ ಹಾಗೆ ನೋಡಿಕೊಳ್ಳುವದು. ಶಾಲೆಯ ಎಲ್ಲ ಸಂಪೂರ್ಣ ಯಶಸ್ವಿಯಲ್ಲಿ ಶಿಕ್ಷಕರ ಪಾತ್ರ ಬಹಳಷ್ಟು ಇದೆ. ಅದನ್ನು ಪಾಲಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸೋಮಶೇಖರ ಬಿರಾದಾರ, ಪ್ರಭು ಬಿರಾದಾರ, ಇಸಿಒ, ಸಿಆರ್‌ಪಿ, ಶಾಲಾ ಮುಖ್ಯ ಗುರುಗಳು, ದೈಹಿಕ ಶಿಕ್ಷಣ ಶಿಕ್ಷಕರು ಹಾಜರಿದ್ದರು.

## ಶಿಕ್ಷಣ ಕ್ಷೇತ್ರ ಆಧುನಿಕ ಆವಿಷ್ಕಾರಗಳೊಂದಿಗೆ ನಿರಂತರವಾಗಿ ಅಭಿವೃದ್ಧಿಯಾಗಬೇಕು: ಚಂದಾವರಕರ

**ವಿಜಯಪುರ:** ಶಿಕ್ಷಣಕ್ಷೇತ್ರವುಆಧುನಿಕ ಆವಿಷ್ಕಾರಗಳೊಂದಿಗೆನಿರಂತರವಾಗಿ ಅಭಿವೃದ್ಧಿಯಾಗಬೇಕು ಎಂದು ಎನ್.ಸಿ.ಟಿ.ಇ ದಕ್ಷಿಣ ಪ್ರಾಂತ ನಿರ್ದೇಶಕಿ ಪ್ರೊ.ಮೀನಾ ಆರ್. ಚಂದಾವರಕರ ಹೇಳಿದರು.




ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಶಿಕ್ಷಣ ಅಧ್ಯಯನ ವಿಭಾಗದಲ್ಲಿ ಗುರುವಾರ ಆಯೋಜಿಸಿದ್ದ 'ಎನ್.ಸಿ.ಟಿ.ಇ ನಿಯಮಗಳು ಮತ್ತು ಮಾನದಂಡಗಳ ಹಿನ್ನೆಲೆಯಲ್ಲಿ ಬಹುಶಿಸ್ತಿನ ಉನ್ನತ ಶಿಕ್ಷಣದ ಪರಿಕಲ್ಪನೆ' ಎಂಬ ವಿಷಯದ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಎನ್.ಇ.ಪಿ. 2020 ಆಧಾರಿತ ಹೊಸ ನಿಯಮಗಳು ಜಾರಿಗೆ ಬರುತ್ತಿವೆ. ಶಿಕ್ಷಣ ಸಂಸ್ಥೆಗಳು ಗುಣಮಟ್ಟದ ಶಿಕ್ಷಣದ ಅಳವಡಿಕೆಗೆ ಸನ್ನದ್ಧವಾಗಬೇಕೆಂದು ಕರೆ ನೀಡಿದರು. ಇಂದಿನ ಪರಿಸ್ಥಿತಿಯಲ್ಲಿ ಗುಣಮಟ್ಟದ ಶಿಕ್ಷಣ ಅಗತ್ಯವಾಗಿದ್ದು, ಅದರ ಅಡಿಯಲ್ಲಿ ಶಿಕ್ಷಣ ಸಂಸ್ಥೆಗಳ ಸಬಲೀಕರಣ, ವಿದ್ಯಾರ್ಥಿ ಕೇಂದ್ರೀಕೃತ ಶಿಕ್ಷಣ ಹಾಗೂ ಉತ್ತಮ ಶಾಲಾ ಶಿಕ್ಷಣವು ಅತ್ಯಂತ ಬೇಡಿಕೆಯ ವಿಷಯಗಳಾಗಿವೆ ಎಂದರು.

ಇದೇ ಸಂದರ್ಭದಲ್ಲಿ ಕಲಬುರಗಿ ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾನಿಲಯದ ಶಿಕ್ಷಣ ವಿಭಾಗದ ಡೀನ್ ಪ್ರೊ.ಜಿ.ಆರ್.ಅಂಗಡಿ ಮಾತನಾಡಿ, ಭವಿಷ್ಯದ ಶಿಕ್ಷಣ ಸಂಸ್ಥೆಗಳ ರೂಪರೇಖೆಯ ಕು–ರಿತು ಎನ್.ಸಿ.ಟಿ.ಇ ನಿಂದ ಹೊರಬಂದಿರುವ ಹೊಸ ನಿಯಮಗಳು ಮತ್ತು ಅವುಗಳ ಅನ್ವಯಿಕೆ ಕುರಿತು ಮಾಹಿತಿ ನೀಡಿದರು.

ಕಾರ್ಯಾಗಾರದಲ್ಲಿ ಮಹಿಳಾ ವಿವಿಯ ಹಂಗಾಮಿ ಕುಲಪತಿ ಪ್ರೊ. ಶಾಂತಾದೇವಿ ಟಿ. ಮಾತನಾಡಿ, ವಿಶ್ವವಿದ್ಯಾಲಯವು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಹೊರಡುವ ಶಿಕ್ಷಣ ಸಂಬಂಧಿತ ನಿಯಮಗಳನ್ನು ಕಾಲಕಾಲಕ್ಕೆ ಪರಿಶೀಲಿಸಿ ಅಳವಡಿಸಿಕೊಳ್ಳುವುದು ಅತ್ಯಂತ ತುರ್ತು ಮತ್ತು ಅವಶ್ಯಕವಾಗಿದೆ ಎಂದರು.

ಉನ್ನತ ಶಿಕ್ಷಣ ಸಂಸ್ಥೆಗಳ ಕಾರ್ಯ ಚಟುವಟಿ–ಕೆಯ ಸವಾಲುಗಳ ಬಗ್ಗೆ ಕಾರ್ಯಾಗಾರದಲ್ಲಿ ಚರ್ಚೆ ಗೋಷ್ಠಿಗಳು ನಡೆದವು. ಕಾರ್ಯಕ್ರಮದಲ್ಲಿ ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್. ಎಂ.ಚಂದ್ರಶೇಖರ್, ವಿವಿಧ ಮಹಿಳಾ ಶಿಕ್ಷಣ ಮಹಾವಿದ್ಯಾಲಯಗಳ ಪ್ರಾಚಾರ್ಯರು ಮತ್ತು ಹಿರಿಯ ಪ್ರಾಧ್ಯಾಪಕರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿಬಿಎಡ್‌ಪ್ರಶಿಕ್ಷಣಾರ್ಥಿಗಳುಮಹಿಳಾ ಗೀತೆ ಹಾಡಿದರು. ಶಿಕ್ಷಣ ನಿಕಾಯದ ಡೀನ್ ಡಾ. ಸಕ್ಪಾಲ್ ಹೂವಣ್ಣ ಸ್ವಾಗತಿಸಿದರು. ಪ್ರೊ. ಬಸವರಾಜ್ ಲಕ್ಕಣ್ಣನವರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರೊ.ವಿಷ್ಣು ಎಂ.ಶಿಂದೆ ನಿರೂಪಿಸಿದರು. ಪ್ರೊ. ಅಶೋಕ್ ಕುಮಾರ್ ಬಿ ಸುರಪುರ ವಂದಿಸಿದರು.

# ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಬಿಎಲ್‌ಒ ಕರ್ತವ್ಯದಿಂದ ಮುಕ್ತಿ ಮಾಡಿ: ಶಿಕ್ಷಕರ ಸಂಘದಿಂದ ಜಿಲ್ಲಾಧಿಕಾರಿಗೆ ಮನವಿ

**ವಿಜಯಪುರ :** ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಮಾತ್ರ ಬಿಎಲ್‌ಒ (ಮತಗಟ್ಟೆ ಮಟ್ಟದ ಅಧಿಕಾರಿ) ಕಾರ್ಯಕ್ಕೆ ನಿಯುಕ್ತಿಗೊಳಿಸಿದ್ದು, ಬಿಎಲ್‌ಒ ಕರ್ತವ್ಯದಿಂದ ಮುಕ್ತಿಗೊಳಿಸಿ ಶಿಕ್ಷಕ–ರಿಗೆ ಪಾಠ ಮಾಡಲು ಅವಕಾಶ ಕೊಡಬೇಕೆಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಪ್ರಧಾನಕಾರ್ಯದರ್ಶಿ ಅರ್ಜುನ ಲಮಾಣಿ ಹೇಳಿದರು.



ಅಪರ ಜಿಲ್ಲಾಧಿಕಾರಿ ಸೋಮನಿಂಗ ಗೆಣ್ಣೂರಹಾಗೂತಹಶೀಲ್ದಾರಪ್ರಶಾಂತ ಚನಗೊಂಡ ಅವರಿಗೆ ಗುರುವಾರ ಸಂಜೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಜಿಲ್ಲೆಯಾದ್ಯಂತ ಪ್ರಾಥಮಿಕ ಶಾಲೆ ಶಿಕ್ಷಕರಿಗೆ ಮಾತ್ರ ಬಿ.ಎಲ್.ಒ ಕರ್ತವ್ಯ ನಿರ್ವಹಿಸಲು ನಿಯುಕ್ತಿ ಮಾಡಿರುವುದು ವಿಷಾದನೀಯ. ಜಿಲ್ಲೆಯ ಪ್ರತಿಯೊಂದು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸರಕಾರಿ ಪ್ರೌಢಶಾಲೆಗಳಿವೆ. ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿವೆ. ಗ್ರಾಮ ಪಂಚಾಯತಿ ಕಛೇರಿಗಳಿವೆ. ಕೈಗಾ–ರಿಕಾ ತರಬೇತಿ ಕೇಂದ್ರಗಳಿವೆ ಮತ್ತು ಪಶು ವೈದ್ಯಕೀಯ ಇಲಾಖೆಯ ನೌಕರರಿದ್ದಾರೆ. ಅಲ್ಲದೆ ಸರಕಾರದಿಂದ ವೇತನ ಪಡೆಯುವ ಇತರೆ ಇಲಾಖೆಯ ನೌಕರರು ಇದ್ದಾರೆ. ಈ ಎಲ್ಲ ಇಲಾಖೆಯ ನೌಕರರನ್ನು ಬಿ.ಎಲ್.ಒ ಎಂದು ಕೆಲಸ ಮಾಡಲು ನೇಮಕ ಮಾಡಬೇಕು. ಕೇವಲ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಮಾತ್ರ ಬಿ.ಎಲ್.ಒ ಗಳೆಂದು ನೇಮಕ ಮಾಡುತ್ತಿರುವುದು ಯಾವ ನ್ಯಾಯ? ಈ ತಂತ್ರದ ಹಿಂದೆ ಖಾಸಗಿ ಶಾಲೆಗಳ ಕೈವಾಡ ಮತ್ತು ಕುಮ್ಮಕ್ಕು ಇರುತ್ತದೆ ಎಂದು ಹೇಳಿದರು.

ರಾಜ್ಯದ ಕನ್ನಡ ಪ್ರಾಥಮಿಕ ಶಾಲೆಗಳನ್ನು ಶಾಶ್ವತವಾಗಿ ಬಂದ್ ಮಾಡುವಲ್ಲಿ ಹಾಗೂ ಕಾನ್ವೆಂಟ್ ಶಾಲೆಗಳನ್ನು ಪ್ರೊ?–ರೀತ್ಸಾಹಿಸುವಲ್ಲಿ ಸಹಕಾರಿಯಾಗಲಿದೆ ಎಂಬಂತಾಗಿದೆ. ಇದರಿಂದ ರಾಜ್ಯದಲ್ಲಿ ಕನ್ನಡ ಭಾಷೆ ಮತ್ತು ಕನ್ನಡ ಶಾಲೆಗಳ ಕಗ್ಗೊಲೆಯಾಗಲಿದೆ. ಅದಾಗಲೇ ಕನ್ನಡ ಶಾಲೆಗಳಲ್ಲಿ ಶಿಕ್ಷಕರ ಕೊರತೆ, ಶಾಲಾ ಕೋಣೆಗಳ ಕೊರತೆ ಇದ್ದು ಜಿಲ್ಲೆಯಾದ್ಯಂತ ಸುಮಾರು 1500 ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ. ಇಲ್ಲಿ ಅನಿವಾರ್ಯವಾಗಿ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಂಡು ಪಾಠ ಭೋಧನೆ ಮಾಡಲಾಗುತ್ತಿದೆ ಎಂದು ನುಡಿದರು.

ಸರಕಾರಿ ಶಾಲೆಗಳ ಪಾಠ ಭೋದನೆ ಜೊತೆಗೆ ಶಿಕ್ಷಕರು ಇಲಾಖೆಯ ಹತ್ತು ಹಲವು ಕೆಲಸಗಳ ಜೊತೆಗೆ ಅಕ್ಷರ ದಾಸೋಹ, ಮೊಟ್ಟೆ, ಬಾಳೆಹಣ್ಣು, ಸಿಲೆಂಡರ್ ತರುವುದು, ಪೊ?ಷಕಾಂಶಯುಕ್ತ ಹಾಲು ವಿತರಣೆ, ತರಕಾರಿ ಖರೀದಿ, ಶಾಲೆ ಸ್ವಚತ್ವ, ಜನಗಣತಿ, ದನಗಣತಿ, ಮನೆಗಣತಿ, ಜಾತಿಗಣತಿ, ಶಾಲೆಯ ಆನಲೈನ್ ದಾಖಲಾತಿ, ಶಿಷ್ಯವೇತನ, ಮಕ್ಕಳ ಆಧಾರ ನೋಂದಣಿ, ದಾಖಲಾತಿ ಆಂದೋಲನ, ಹಾಜರಾತಿ ಆಂದೋಲನ, ಸಮುದಾಯದತ್ತ ಶಾಲೆ, ಪ್ರತಿಭಾ ಕಾರಂಜಿ, ಕ್ರೀಡಾಕೂಟ, ಕಲೋತ್ಸವ ಮುಂತಾದ ಕೆಲಸ ಕಾರ್ಯಗಳನ್ನು ನಿರ್ವಹಿಸಿಕೊಂಡು ಹೋಗಬೇಕಾಗಿದೆ. ಹೀಗೆ ಪ್ರಾಥಮಿಕ ಶಾಲಾ ಶಿಕ್ಷಕರು ಕರ್ತವ್ಯದ ತೀವ್ರ ಮಾನಸಿಕ ಒತ್ತಡದಲ್ಲಿ ಕೆಲಸ ಮಾಡುತ್ತಿದ್ದೇವೆ ಎಂದರು.

ಇಂತಹ ಪರಿಸ್ಥಿತಿಯಲ್ಲಿ 5–6 ಜನ ಶಿಕ್ಷಕರಿರುವ ಶಾಲೆಯಲ್ಲಿ 3–4 ಜನ ಶಿಕ್ಷಕರನ್ನು ಬಿ.ಎಲ್.ಒ ಕೆಲಸಕ್ಕೆ ನೇಮಿಸಿದ ಉದಾಹರಣೆಗಳಿವೆ. ಹೀಗಾದರೆಶಾಲೆಗಳಸ್ಥಿತಿಏನಾಗಬೇಡ? ಎಂಬುದನ್ನು ಸಹಾನುಭೂತಿಯಿಂದ ಪರಿಶೀಲಿಸಬೇಕು. ದಯವಿಟ್ಟು ನಮ್ಮ ಮನವಿಯನ್ನು ಪುರಸ್ಕರಿಸಿ ಆಯಾ ಗ್ರಾಮದಲ್ಲಿ ಬರತಕ್ಕಂತಹ ಎಲ್ಲ ಇಲಾಖೆಯ "ಸಿ" ದರ್ಜೆ ನೌಕರರನ್ನು ಬಿ.ಎಲ್.ಒ ಗಳೆಂದು ನೇಮಕಾತಿ ಮಾಡಬೇಕು. ಆ ಮೂಲಕ ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಮತ್ತು ಶಿಕ್ಷಣ–ಕ್ಕೆ ಆಗುತ್ತಿರುವ ಕೆಲಸದ ಒತ್ತಡ ಹಾಗೂ ಅನ್ಯಾಯವನ್ನು ಸರಿಪಡಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಣಮಂತ ಕೊಣದಿ, ಜಿ.ವಿ.ಮಠ, ಅಶೋಕ ಬೂದಿಹಾಳ, ಎ.ಬಿ.ಧಡಕೆ, ಸಾಬು ಗಗನಮಾಲಿ, ರಾಜು ಬಿಸನಾಳ, ಸಂತೋಷ ಬಗಲಿ, ಪಿ.ಬಿ. ಮಂಕಣಿ, ಅಶೋಕ ಚನಬಸಗೋಳ, ಪ್ರಕಾಶ ಕುಲಂಗೆ, ಬಸವರಾಜ ಮೇಡೆಗಾರ, ಬಸವರಾಜ ಹೊಸಮನಿ, ಶ್ರೀಶೈಲ ಬಬಲೇಶ್ವರ, ನಿಂಗರೆಡ್ಡಿ, ಕುರುವಿನಶೆಟ್ಟಿ ಇತರರಿದ್ದರು.

# ಅಚ್ಚುಕಟ್ಟು ಪ್ರದೇಶದ ಕೃಷಿಯಲ್ಲಿ ಆರ್ಥಿಕ ಸುಸ್ಥಿರತೆಗಾಗಿ ಪರ್ಯಾಯ ಬೆಳೆ ಯೋಜನೆಯ ಮಾರ್ಗೋಪಾಯಗಳ ಕುರಿತು ಗ್ರಾಮ ಮಟ್ಟದ ತರಬೇತಿ

**ವಿಜಯಪುರ :** ಜಲ ಸಂಪನ್ಮೂಲ ಸಂರಕ್ಷಣೆ ಹಾಗೂ ನಿರ್ವಹಣೆ ಕುರಿತು ಘಟಪ್ರಭಾ ಅಚ್ಚುಕಟ್ಟು ಪ್ರದೇಶದ ಬಾಗಲಕೋಟೆ ಜಿಲ್ಲೆ ರಬಕವಿ–ಬನಹಟ್ಟಿ ತಾಲೂಕಿನ ನಂದಗಾವ ಗ್ರಾಮದಲ್ಲಿ ನೀರು ಬಳಕೆದಾರರ ಸಹಕಾರಿ ಸಂಘಗಳ ಪದಾಧಿಕಾರಿಗಳಿಗೆ, ಸದಸ್ಯರಿಗೆ ಹಾಗೂ ರೈತರಿಗೆ ಜೂ. 18ರಂದು ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ, ವಾಲ್ಮಿ ಧಾರವಾಡ ನಿರ್ದೇಶಕ ಡಾ. ಗಿರೀಶ ಎನ್. ಮರಡ್ಡಿ ಇವರ ಅಧ್ಯಕ್ಷತೆಯಲ್ಲಿ ಗ್ರಾಮಮಟ್ಟದ ಕಾರ್ಯಾಗಾರ ಜರುಗಿತು.

ಜಿ.ಎಲ್.ಬಿ.ಸಿ ವಿಭಾಗ ನಂ–2 ಜಮಖಂಡಿಂ–ಮ ಕಾರ್ಯಪಾಲಕ ಅಭಿಯಂತರ ಶ್ರೀಶೈಲ ಎಸ್. ಕಲ್ಯಾಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರತಿಯೊಬ್ಬ ರೈತರು ಕಾಲುವೆ ನೀರನ್ನು ಸಮರ್ಪಕವಾಗಿ ಹಾಗೂ ಸಮನಾಗಿ ಬಳಸುವ ಮೂಲಕ ನೀರಿನ ಅಪವ್ಯಯ ಆಗದಂತೆ ಸದ್ಬಳಕೆ ಮಾಡಿಕೊಳ್ಳಬೇಕೆಂದರು.

ಕಾಲುವೆಜಾಲವನ್ನುಸುಸ್ಥಿತಿಯಲ್ಲಿಇಟ್ಟುಕೊಳ್ಳುವ ಮೂಲಕ ಕೊನೆಯ ಭಾಗದ ರೈತರಿಗೂ ನೀರು ತಲುಪಿಸಲು ಇಲಾಖೆಯೊಂದಿಗೆ ಸಂಘಗಳು ಸಹಕರಿಸಬೇಕೆಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ ಧಾರವಾಡದ ವಾಲ್ಮಿ ಸಂಸ್ಥೆಯ ನಿರ್ದೇಶಕ ಡಾ. ಗಿರೀಶ ಎನ್. ಮರಡ್ಡಿ ಮಾತನಾಡಿ, ಯುವ ರೈತರು ಕೃಷಿ ಚಟುವಟಿ–ಕೆಗಳಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳಬೇಕೆಂದರು. ಕೇವಲ ಕಬ್ಬನ್ನು ಮಾತ್ರ ಬೆಳೆಯದೆ ಪರ್ಯಾಯ ಬೆಳೆಗಳನ್ನು ಮುಖ್ಯವಾಗಿ ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುವ ದ್ವಿದಳ ಧಾನ್ಯವನ್ನು ಬೆಳೆದು ತಮ್ಮ ಆರ್ಥಿಕ ಮಟ್ಟವನ್ನು ಸುಧಾರಿಸಕೊಳ್ಳಬೇಕೆಂದು ಹೇಳಿದರು.

ಕಬ್ಬಿನ ಸಾಲುಗಳ ಮಧ್ಯೆ ಅಲ್ಪಾವಧಿಯ ಇತರ ಬೆಳೆಗಳನ್ನು ಬೆಳೆಯುವುದರಿಂದ ಆಗುವ ಲಾಭಗಳನ್ನು ಸವಿಸ್ತಾರವಾಗಿ ತಿಳಿಸಿದರು. ಇದೂ ಅಲ್ಲದೇ ಮಣ್ಣು ಪರೀಕ್ಷೆಯ ವಿಧಾನ, ಮಹತ್ವ ಹಾಗೂ ಅದರ ಆಧಾರದ ಮೇಲೆ ಬೆಳೆಗಳಿಗೆ ಪೋಷಕಾಂಶಗಳನ್ನು ಒದಗಿಸಿಬೇಕೆಂದು ಸಲಹೆ ನೀಡುತ್ತಾ, ಅಚ್ಚುಕಟ್ಟು



ರೈತರ ಸಾಮರ್ಥ್ಯವರ್ಧನೆ ಕುರಿತಂತೆ ವಾಲ್ಮಿ ಸಂಸ್ಥೆಯು ನಿರಂತರವಾಗಿ ತರಬೇತಿ ನೀಡಲು ಸನ್ನದ್ಧವಾಗಿದೆ ಎಂದು ಹೇಳಿದರು.

ಅತಿಥಿ ಉಪನ್ಯಾಸಕ ಸ?ರೇಶ ಕುಲಕರ್ಣಿ ಪ್ರಾಸ್ತಾವಿಕ ನುಡಿಗಳನ್ನಾಡಿ, ತಾಂತ್ರಿಕ ಗೋಷ್ಠಿಯಲ್ಲಿ ನೀರು ಬಳಕೆದಾರರ ಸಹಕಾರ ಸಂಘಗಳು ಹಸ್ತಾಂತರಗೊಂಡ ನೀರಾವರಿ ವ್ಯವಸ್ಥೆಯ ನಿರ್ವಹಣೆ ನಿಗಮದೊಂದಿಗೆ ಮಾಡಿಕೊಂಡ ಒಪ್ಪಂದದನ್ವಯ ಕಾರ್ಯ ನಿರ್ವಹಿಸುವ ವಿಧಾನ ಹಾಗೂ ಸಂಘಗಳಲ್ಲಿ ಸಂಪನ್ಮೂಲ ಕ್ರೋಢಿಕರಣ ಕುರಿತು ಮಾಹಿತಿ ನೀಡಿದರು. ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ ವಿಜ್ಞಾನಿ ಡಾ. ಸುನೀಲ್‌ಕುಮಾರ ನೂಲಿ ಅವರು, ಅಚ್ಚುಕಟ್ಟು ಪ್ರದೇಶದ ಮುಖ್ಯ ಬೆಳೆಗಳಾದ ಕಬ್ಬು, ಗೋವಿನ ಜೋಳ, ಅರಿಶಿಣದಲ್ಲಿ ಉತ್ಪಾದಕತೆ ಹೆಚ್ಚಿಸುವ ಕುರಿತು ಉಪನ್ಯಾಸ ನೀಡುತ್ತಾ ಕಬ್ಬಿನಲ್ಲಿ ಸೂಕ್ತವಾದ ತಳಿಗಳ ಆಯ್ಕೆ, ಬಿತ್ತನೆ ಮಾಡುವಾಗ ಬಿತ್ತನೆ ತುಂಡುಗಳ ಬೀಜೋಪಚಾರ ವಿಧಾನ ಹಾಗೂ ಅದರ ಮಹತ್ವ, ಕಳೆಬರದಂತೆ ಕಳೆನಾಶಕ ಬಳಸುವ ಪದ್ಧತಿ, ಅಗಲ ಸಾಲು ಪದ್ಧತಿಯಲ್ಲಿ ನಾಟಿ ಮಾಡುದರಿಂದ ಅಂತರಬೆಳೆ ಬೆಳೆಯಬಹುದು. ಕಬ್ಬಿನ ಬೆಳೆಗೆ ಉಪಯೋಗಿಸಬಹುದಾದ ರಾಸಾಯನಿಕ ಗೊಬ್ಬರಗಳ ಪ್ರಮಾಣವನ್ನು ವಿವರಿಸಿದರು. ಬೇಸಿಗೆಯಲ್ಲಿ ಭೂಮಿಯನ್ನು ಆಳವಾಗಿ ಉಳುಮೆ ಮಾಡುವುದರಿಂದಾಗುವ ಪ್ರಯೋಜನ, ಕಬ್ಬಿನ ಕೂಳೆ ಬೆಳೆಯ ಇಳುವ–ರಿಯಲ್ಲಿ ಕಡಿಮೆಯಾಗಲು ಕಾರಣಗಳ ಬಗ್ಗೆ ತಿಳಿಸಿ, ಕಬ್ಬಿನ ರವದಿಯನ್ನು ಹರಡುವುದರಿಂದ ಆಗುವ ಲಾಭಗಳ ಬಗ್ಗೆ ಮಾಹಿತಿ ನೀಡಿದರು. ಯಾವುದೇ ಕಾರಣಕ್ಕೂ ರೈತರು ರವದಿಯನ್ನು ಸುಡಬಾರದೆಂದು ತಿಳಿಸಿದರು.

ವಾಲ್ಮಿ, ಸಮಾಲೋಚಕ ರಾಘವೇಂದ್ರ ತೆಗ್ಗಿ ಇವರು ಕಬ್ಬಿನಲ್ಲಿ ಬರುವ ಕೀಟಗಳಾದ ಗೊಣ್ಣೆ ಹುಳು, ಆದಿ ಸುಳಿ ಕೊರಕ, ಬಿಳಿ ಉಣ್ಣೆ, ಹೇನು ಹಾಗೂ ವಿಕೃತ ಕೊಳೆ ರೋಗದ ಬಗ್ಗೆ ರೈತರಿಗೆ ವಿಸ್ತಾರವಾಗಿ ಹೇಳಿದರು. ಶ್ರೀ.ನೀ.ಬ.ಸ.ಸಂಘ, ನಂದಗಾವ ಅಧ್ಯಕ್ಷ ಬಿ. ಜಿ. ಹೊಸುರು ಮಾತನಾಡುತ್ತಾ, ವಾಲ್ಮಿ ಸಂಸ್ಥೆ ವತಿಯಿಂದ ಸಂಘದಪದಾಧಿಕಾರಿಗಳಿಗೆ,ಸದಸ್ಯರಿಗೆಹಾಗೂ ರೈತರಿಗೆ ಒಳಾಂಗಣ ಹಾಗೂ ಗ್ರಾಮ ಮಟ್ಟದ ತರಬೇತಿ ನೀಡುವುದರ ಮೂಲಕ ಹೆಚ್ಚಿನ ಜ್ಞಾನವನ್ನು ನೀಡುತ್ತಿದ್ದು, ಇದರಿಂದ ರೈತ–ರಿಗೆ ನೀರಿನ ಉಳಿತಾಯದೊಂದಿಗೆ ಕೃಷಿಯಲ್ಲಿ ಯಶಸ್ವಿಯಾಗಲು ಅನುಕೂಲವಾಗುತ್ತದೆ ಎಂದು ತಿಳಿಸಿದರು. ವಾಲ್ಮಿ ಸಹ ಪ್ರಾಧ್ಯಾಪಕ, ಕಾರ್ಯಕ್ರಮದ ಸಂಯೋಜಕ ಸುಧೀಂದ್ರ ಕೆ. ಎಸ್., ಇವರು ಮಣ್ಣು ಹಾಗೂ ನೀರಿನ ಸಂರಕ್ಷಣೆ ಮಾಡುವಂತೆ ತಿಳಿಸುತ್ತಾ, ಎಲ್ಲರಿಗೂ ವಂದಿಸಿದರು. ನೀ.ಬ.ಸ. ಸಂಘದ ಪದಾಧಿಕಾರಿ ಮಾರುತಿ ಇಟ್ನಾಳ ಹಾಗೂ ಸಂಘದ ಕಾರ್ಯದರ್ಶಿ ಲಕ್ಷ್ಮಣ ದಾಸರ ಸೇರಿದಂತೆ ಗ್ರಾಮಸ್ಥರು, ರೈತರು ಭಾಗವಹಿಸಿದ್ದರು.

# ಮಕ್ಕಳ ಅಸಹಜ ಸಾವು ಸಂಭವಿಸದಂತೆ ಅಧಿಕಾರಿಗಳು ಗಮನಹರಿಸಿ: ಶೇಖರಗೌರ ಜಿ. ರಾಮತ್ನಾಳ



**ಕೊಪ್ಪಳ** : ಮಕ್ಕಳ ಅಸಹಜ ಸಾವಿನ ಪ್ರಕರಣಗಳು ಸಂಭವಿಸದಂತೆ ಎಲ್ಲಾ ಇಲಾಖೆಯಅಧಿಕಾರಿಗಳುಸೂಕ್ತಗಮನಹರಿಸುವಂತೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌರ ಜಿ. ರಾಮತ್ನಾಳ ಹೇಳಿದರು. ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ. ಕೆ.ಟಿ. ತಿಪ್ಪೇಸ್ವಾಮಿ ಅವರ ಉಪಸ್ಥಿತಿಯಲ್ಲಿ ಕೊಪ್ಪಳ ಜಿಲ್ಲೆಯ "ಮಕ್ಕಳ ಅಸಹಜ ಸಾವಿನ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ" ವಿವಿಧ ಭಾಗೀದಾರರ ಇಲಾಖೆಗಳ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.ಇತ್ತೀಚೆಗೆ ವಿದ್ಯುತ್ ಸ್ಪರ್ಶ, ನಿಷ್ಕ್ರಿಯ ಕಲ್ಲುಕ್ವಾರಿ ಮತ್ತು ಕೃಷಿಹೊಂಡಗಳಲ್ಲಿ ಈಜಲು ಹೋಗಿ ಮಕ್ಕಳು ಸಾವನ್ನಪ್ಪಿರುವುದು, ಆತ್ಮಹತ್ಯೆ ಹಾಗೂ ಹಾವುಕಡಿತ ಮುಂತಾದ ಕಾರಣಗಳಿಂದ ಮಕ್ಕಳು ಮರಣಹೊಂದುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿದ್ದು, ಜಿಲ್ಲೆಯಲ್ಲಿ 2023ನೇ ಸಾಲಿನಲ್ಲಿ 31 ಮಕ್ಕಳು 2024ನೇ ಸಾಲಿನಲ್ಲಿ 42 ಮಕ್ಕಳು ಹಾಗೂ ಪ್ರಸ್ತುತ ಸಾಲಿನಲ್ಲಿ ಇದುವರೆಗೆ 18 ಮಕ್ಕಳು ಸಾವನ್ನಪ್ಪಿರುವುದು ಅಘಾತಕಾರಿ ಸಂಗತಿಯಾಗಿದೆ. ಆದ್ದರಿಂದ ಮಕ್ಕಳ ಸುರಕ್ಷತೆ ಮತ್ತು ಮಕ್ಕಳ ಅಸಹಜ ಸಾವಿನ ಪ್ರಕರಣಗಳು ಸಂಭವಿಸದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಸೂಕ್ತ ಗಮನಹರಿಸಿ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಿದರು.

ಇದೆ ಜೂನ್ 19 ರಂದು ಜಿಲ್ಲೆಯ ವಿವಿಧ ಶಾಲೆ, ವಸತಿ ಶಾಲೆ, ಅಂಗನವಾಡಿ ಕೇಂದ್ರ, ಪಂಚಾಯತಿ, ಮಕ್ಕಳ ಪಾಲನಾ ಸಂಸ್ಥೆಗಳು, ಮಕ್ಕಳ ವಿಶೇಷ ಪೊಲೀಸ್ ಘಟಕ ಮತ್ತು ಪೋಲೀಸ್ ಠಾಣೆಗಳಿಗೆ ಪ್ರವಾಸ ಕೈಗೊಂಡು ಪರೀಶೀಲಿಸಿ ಮಕ್ಕಳ ಹಕ್ಕುಗಳ ಅನುಷ್ಟಾನ ಮತ್ತು ತೆಗೆದುಕೊಂಡ ರಕ್ಷಣಾ ಕ್ರಮಗಳ ಕುರಿತು ಮಾಹಿತಿ ಪಡೆಯಲಾಗಿದೆ ಎಂದರು.ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಡಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ, ಸರ್ಕಾರಿ ಮತ್ತು ಖಾಸಗಿ ಶಾಲೆ, ಕಾಲೇಜು, ವಸತಿಯುತ ಶಾಲೆಯ ಮಕ್ಕಳ ಪಾಲನಾ ಸಂಸ್ಥೆಗಳಗಳ ಕಂಪೌಡ ಒಳಗೆ ಯಾವುದೇ ವಿದ್ಯುತ್‌ಟಿ.ಸಿಯನ್ನುಅಳವಡಿಸಿರಬಾರದು. ಶಾಲೆಯ ಮೇಲ್ಛಾವಣಿ, ಆವರಣ ಹಾಗೂ ಮೈದಾನಗಳ ಮೇಲೆ ಯಾವುದೇ ತರಹದ ವಿದ್ಯುತ್ ತಂತಿಗಳು ಹಾದುಹೋಗಿರಬಾರದು. ಒಂದುವೇಳೆ ಅಂಗನವಾಡಿ ಶಾಲೆ, ಕಾಲೇಜು ಮತ್ತು ವಸತಿಯುತ ಶಾಲೆಗಳ ಕಂಪೌಡ ಒಳಗೆ ವಿದ್ಯುತ್ ತಂತಿಗಳು ಹಾದುಹೋಗಿದ್ದಲ್ಲಿ ಅದರ ಮಾಹಿತಿಯನ್ನು ಇಲಾಖಾ ಮುಖ್ಯಸ್ಥರು ಜುಲೈ 10ರೊಳಗಾಗಿ ಸಂಗ್ರಹಿಸಿ ಸಂಬಂಧಿಸಿದ ಜೆಸ್ಕಾಂ ಇಲಾಖೆರವರಿಗೆ ಮಾಹಿತಿಯನ್ನು ಸಲ್ಲಿಸಿ, ವಿದ್ಯುತ್ ಲೈನ್ ತೆರವುಗೊಳಿಸಲು ಕ್ರಮವಹಿಸಿ ಆಯೋಗಕ್ಕೆ ತುರ್ತಾಗಿ ವರದಿ ಸಲ್ಲಿಸುವಂತೆ ಸೂಚಿಸಿದರು.ಮಕ್ಕಳ ಸಂರಕ್ಷಣೆ ಹಿತದೃಷ್ಟಿಯಿಂದ ಎಲ್ಲಾ ಶಾಲೆ, ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಮಕ್ಕಳ ರಕ್ಷಣಾ ನೀತಿ-2016ರನ್ನು ಅನುಷ್ಟಾನಗೊಳಿಸಿ ಮಕ್ಕಳಿಗೆ ಸೂಕ್ತ ಭದ್ರತೆ ನೀಡಿರುವ ಬಗ್ಗೆ ಖಾತ್ರಿಪಡಿಕೊಂಡು ಆಯೋಗಕ್ಕೆ 20ದಿನಗಳ ಒಳಗಾಗಿ ವರದಿ ಸಲ್ಲಿಸಲು ಶಿಕ್ಷಣ ಇಲಾಖೆ, ಹಿಂದುಗಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿಗಳಿಗೆ ಕ್ರಮ ವಹಿಸುವಂತೆ ತಿಳಿಸಿದರು. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ. ಕೆ.ಟಿ. ತಿಪ್ಪೇಸ್ವಾಮಿ ಅವರು ಮಾತನಾಡಿ, ಶಾಲೆ ಮತ್ತು ಕಾಲೇಜುಗಳಿಂದ ಮಕ್ಕಳು ಹೊರಗುಳಿಯದಂತೆ ಸೂಕ್ತ ಕ್ರಮವಹಿಸಿ ಪುನಃ ಮಕ್ಕಳನ್ನು ಶಾಲೆ, ಕಾಲೇಜುಗಳಿಗೆ ಹಾಜರಾಗಲು ಕ್ರಮವಹಿಸಬೇಕು.

ಬಾಲ್ಯವಿವಾಹ, ಪೋಕ್ಸೊ ಹಾಗೂ ಮುಂತಾದ ದೌರ್ಜನ್ಯಗಳಿಂದ ಮಕ್ಕಳನ್ನು ರಕ್ಷಿಸಲುಅಧೀನಅಧಿಕಾರಿಗಳಿಗೆಜವಾಬ್ದಾರಿ ನಿಗದಿಪಡಿಸಬೇಕು. ಯಾವುದೇ ಮಗು ಶಾಲೆಯಿಂದ ಹೊರಗುಳಿಯದೇ ಶಿಕ್ಷಣ ಪಡೆಯಲು ಮತ್ತು ಸೂಕ್ತ ರಕ್ಷಣೆ ಹೊಂದಲು ಕ್ರಮವಹಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.ಪೊಲೀಸ್ ಇಲಾಖೆಯಿಂದ ನಿಯಮಿತವಾಗಿ ತೆರೆದಮನೆ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಆಯೋಜಿಸುವ ಮೂಲಕ ಮಕ್ಕಳ ಸುರಕ್ಷತಾ ಕ್ರಮಗಳ ಕುರಿತು ಹೆಚ್ಚು ಮಕ್ಕಳು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮತ್ತು ಶಾಲಾ ಅವಧಿ ಮತ್ತು ರಜಾ ದಿನಗಳಲ್ಲಿ ಶಾಲಾ ಆವರಣದಲ್ಲಿ ಅಹಿತಕರ ಘಟನೆಗಳು ನಡೆಯದಂತೆ ನಿಯಮಿತವಾಗಿ ಪೊಲೀಸ್ ಬೀಟ್ ವ್ಯವಸ್ಥೆಯನ್ನು ಎಲ್ಲಾ ಶಾಲೆ ಮತ್ತು ಕಾಲೇಜುಗಳಿಗೆ ಒದಗಿಸಲು ಹಾಗೂ ಶಾಲೆ, ಕಾಲೇಜುಗಳ ಸುತ್ತಮುತ್ತ ಯಾವುದೇ ತಂಬಾಕು ಮತ್ತು ಮದ್ಯ ಮಾರಾಟ ಅಂಗಡಿಗಳಿದ್ದಲ್ಲಿ ಪರೀಶೀಲಿಸಿ, ಒಂದು ತಿಂಗಳ ಒಳಗಾಗಿ ಅವುಗಳನ್ನು ತೆರವುಗೊಳಿಸಲು ಕ್ರಮವಹಿಸುವಂತೆ ತಿಳಿಸಿದರು.ಎಲ್ಲಾ ಇಲಾಖೆಗಳು ಪತ್ರ ವ್ಯವಹಾರ ಮಾಡುವ ಸಂದರ್ಭದಲ್ಲಿ ಪತ್ರದ ಕೆಳಭಾಗದಲ್ಲಿ ಕಡ್ಡಾಯವಾಗಿ "ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ" ಎಂಬ ಬರಹವನ್ನು ಮುದ್ರಿಸುವುದು ಹಾಗೂ ಎಲ್ಲಾ ಇಲಾಖೆಯ ಕಚೇರಿಗಳ ಮುಂಭಾಗದಲ್ಲಿ "ಮಕ್ಕಳ ಸಹಾಯವಾಣಿ 1098ರ ಶಾಶ್ವತ ಗೋಡೆಬರಹವನ್ನು ಕಡ್ಡಾಯವಾಗಿ ಒಂದು ತಿಂಗಳ ಒಳಗಾಗಿ ಬರೆಯಿಸಿ ಜಿ.ಪಿ.ಎಸ್ ಪೋಟೋ ಸಹಿತ ಆಯೋಗಕ್ಕೆ ವರದಿ ನೀಡುವ ಮೂಲಕ ಸಾರ್ವಜನಿಕರಿಗೆ ಬಾಲ್ಯವಿವಾಹ ನಿಷೇದ ಹಾಗೂ ಮಕ್ಕಳ ರಕ್ಷಣೆಯ ಅವಶ್ಯಕತೆ ಕುರಿತು ಹೆಚ್ಚು ಪ್ರಚಾರ ಮಾಡಲು ಕ್ರಮವಹಿಸುವಂತೆ ಸೂಚನೆ ನೀಡಿದರು.

ಈ ಸಭೆಯಲ್ಲಿ ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್ ಕುಮಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ಶೆಟ್ಟೆಪ್ಪನವರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಸೇರಿದಂತೆ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಹಾಗೂ ಎಲ್ಲಾ ಇಲಾಖೆಗಳ ಜಿಲಾಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಕುಕನೂರು ಪ.ಪಂ: ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

**ಕೊಪ್ಪಳ** : ಕುಕನೂರು ಪಟ್ಟಣ ಪಂಚಾಯತಿ ವತಿಯಿಂದ 2025-26ನೇ ಸಾಲಿನ ಎಸ್.ಎಫ್.ಸಿ ಅನುದಾನದಲ್ಲಿ ಶೇ.24.10 ಹಾಗೂ ಶೇ.7.25 ರ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಜನಾಂಗದ ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಹಾಗೂ ಇತರೆ ಸೌಲಭ್ಯಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವ್ಯಕ್ತಿಗತ ಕಾರ್ಯಕ್ರಮ ಯೋಜನೆಯಡಿ ಪರಿಶಿಷ್ಟ ಜಾತಿ,ಪರಿಶಿಷ್ಟಪಂಗಡಕ್ಕೆಮೀಸಲಿರಿಸಿದತಲಾಶೇ.40 ರ ಕಾರ್ಯಕ್ರಮದಲ್ಲಿ ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹಾಗೂ ಶೇ.7.25ರ ಯೋಜನೆಯ ಅನುದಾನದಲ್ಲಿ ಶೇ.40 ರ ಕಾರ್ಯಕ್ರಮದಲ್ಲಿ ಇತರೆ ಬಡ ಜನಾಂಗದ ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಲಾಗುತ್ತದೆ. ಈ ಸೌಲಭ್ಯಕ್ಕಾಗಿ ಫಲಾನುಭವಿಗಳು ಹಿಂದಿನ ವರ್ಷದ ಅಂಕಪಟ್ಟಿ, ಚಾಲ್ತಿ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಬಗ್ಗೆ ಶಿಕ್ಷಣ ಸಂಸ್ಥೆಯಿಂದ ಪ್ರಮಾಣ ಪತ್ರ, ಪ್ರಸಕ್ತ ಸಾಲಿನಲ್ಲಿ ಯಾವುದೇ ಇಲಾಖೆಯಿಂದ ಪ್ರೋತ್ಸಾಹಧನ ಪಡೆದಿಲ್ಲದಿರುವ ಕುರಿತು ಒಪ್ಪಿಗೆ ಪತ್ರ(ಛಾಪಾ ಕಾಗದ), ಚಾಲ್ತಿ ವರ್ಷದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಸ್ಪಷ್ಟವಾಗಿರುವ ಬ್ಯಾಂಕ್ ಪಾಸ್‌ಪುಸ್ತಕದ ಝೆರಾಕ್ಸ್ ಪ್ರತಿ, ಇತ್ತೀಚಿನ 2 ಭಾವಚಿತ್ರಗಳನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು.

ಪ.ಪಂ.ವ್ಯಾಪ್ತಿಯ ವಿಕಲಚೇತನರಿಗಾಗಿ ನೀಡಲಾಗುವ ಸಾಧನ ಸಲಕರಣೆಗಳನ್ನು(02 ಶ್ರವಣ ಯಂತ್ರಗಳು) ಪಡೆಯಲು ಅಂಗವಿಕಲತೆಯ ಪ್ರಮಾಣ ಪತ್ರ, ವಿಕಲಚೇತನ ಆಧಾರ್ ಕಾರ್ಡ್, ರೇಷನ್ ಕಾರ್ಡ್, ಆದಾಯ ಪ್ರಮಾಣ ಪತ್ರ, ವಿಕಲಚೇತನರ ಇತ್ತೀಚಿನ 2 ಭಾವಚಿತ್ರಗಳನ್ನು ಸಲ್ಲಿಸಬೇಕು. ಬುದ್ಧಿಮಾಂದ್ಯ ಮತ್ತು ಸಿ.ಪಿ. ಮಕ್ಕಳ ಫಿಜಿಯೋಥೆರಪಿಗೆ ಬೇಕಾದ ಸಾಮಗ್ರಿಗಳನ್ನು (ಅಂಗವಿಕಲ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸರ್ಕಾರೇತರ ಸಂಸ್ಥೆಗೆ) ಪಡೆಯಲು ವಿಕಲಚೇತನರು ಸಂಸ್ಥೆಯ ನೋಂದಣಿ ಮತ್ತು ನವೀಕರಣ ಪ್ರತಿ, 5 ವರ್ಷದ ಲೆಕ್ಕ ಪರಿಶೋಧನಾ ವರದಿ, ಸಂಸ್ಥೆಯ ಪಾನ್‌ಕಾರ್ಡ್, ಸಂಸ್ಥೆಯ ಬ್ಯಾಂಕ್ ಖಾತೆ ಪ್ರತಿಯನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು.

ಪರಿಶಿಷ್ಟ ಪಂಗಡದವರಿಗೆ ಪಕ್ಕಾ ಮನೆ ನಿರ್ಮಾಣಕ್ಕೆ ನೀಡಲಾಗುವ ಸಹಾಯಧನ(ರೂ.50,000/-)ಕ್ಕಾಗಿ ಫಲಾನುಭವಿಗಳು ಚಾಲ್ತಿ ಸಾಲಿನ ಆಸ್ತಿ ತೆರಿಗೆ ರಶೀದಿ, ಪ.ಪಂ. ಯಲ್ಲಿ ಸ್ವತ್ತಿನ ಖಾತೆ ಇದ್ದ ಬಗ್ಗೆ ಚಾಲ್ತಿ ಸಾಲಿನ ನಮೂನೆ-3, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ಪಡಿತರ ಚೀಟಿ, ಫಲಾನುಭವಿಯ ಇತ್ತೀಚಿನ 2 ಭಾವಚಿತ್ರಗಳನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು.

ಪರಿಶಿಷ್ಟ ಜಾತಿಯ ಎಲ್‌ಎಲ್‌ಬಿ ಪದವಿ ಹೊಂದಿದ ವೃತ್ತಿ ನಿರತ ವಕೀಲರಿಗೆ ಪುಸ್ತಕ ಖರೀದಿಗಾಗಿ ಸಹಾಯಧನ ಪಡೆಯಲು ಎಲ್‌ಎಲ್‌ಬಿ ಪಾಸಿಂಗ್ ಪ್ರಮಾಣ ಪತ್ರ, ಕರ್ನಾಟಕ ವಕೀಲರ ಪರಿಷತ್‌ನಿಂದ ವಕೀಲರ ನೋಂದಣಿ ಪ್ರಮಾಣ ಪತ್ರ, ಆಲ್ ಇಂಡಿಯಾ ಬಾರ್ ಎಕ್ಸಾಮಿನೇಶನ್ ಪಾಸಾದ ಪ್ರಮಾಣ ಪತ್ರ, ಸಂಬಂಧಪಟ್ಟ ವಕೀಲರ ಸಂಘದಲ್ಲಿ ಸದಸ್ಯತ್ವ ಪಡೆದಿರುವ ಬಗ್ಗೆ ಪ್ರಮಾಣ ಪತ್ರ, ವಕೀಲರ ಗುರುತಿನ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಇತ್ತೀಚಿನ ಒಂದು ಭಾವಚಿತ್ರವನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು. ಮೇಲಿನ ಸೌಲಭ್ಯಗಳನ್ನು ಪಡೆಯಲು ಅರ್ಜಿದಾರರು ಪ್ರಸಕ್ತ ಸಾಲಿನಲ್ಲಿಯಾವುದೇಇಲಾಖೆಯಿಂದಪ್ರೋತ್ಸಾಹಧನ ಸೌಲಭ್ಯ ಪಡೆದಿರಬಾರದು. ಪಟ್ಟಣ ಪಂಚಾಯತಿ ವ್ಯಾಪ್ತಿಯ ಖಾಯಂ ನಿವಾಸಿಯಾಗಿರಬೇಕು. ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದ್ದು, ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಪೂರ್ಣ ದಾಖಲತಿ ಇರದ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು. ಅಂಗವಿಕಲರಅಭಿವೃದ್ಧಿಗಾಗಿಶ್ರಮಿಸುವಸರ್ಕಾರೇತರ ಸಂಸ್ಥೆಯು ಈ ಹಿಂದೆ ಯಾವುದೇ ಇಲಾಖೆಯಿಂದ ಆರ್ಥಿಕ ಸಹಾಯಧನ ಮತ್ತು ಫಿಜಿಯೋ ಥೆರಪಿಗೆ ಬೇಕಾದ ಸಾಮಗ್ರಿಗಳನ್ನು ಪಡೆದಿರಬಾರದು. ಪಕ್ಕಾ ಮನೆ ನಿರ್ಮಾಣಕ್ಕೆ ಅರ್ಜಿ ಸಲ್ಲಿಸಿರುವ ಅರ್ಜಿದಾರರ ಹೆಸರಿನಲ್ಲಿ ಆಸ್ತಿ ಹೊಂದಿರಬೇಕು ಎಂದು ಪ.ಪಂ. ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಮನವಿ



**ಕೊಪ್ಪಳ** : ಕೊಪ್ಪಳದ ಭಾಗ್ಯನಗರ ನಿವಾಸಿಯಾದ ಬಸವರಾಜ ಸಿದ್ದನಗೌಡ ಬುಡ್ಡನಗೌಡ್ರು ಎಂಬ 50 ವರ್ಷದ ವ್ಯಕ್ತಿಯು 2024 ರ ಫೆಬ್ರವರಿ 21 ರಿಂದ ಕಾನೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಕೊಪ್ಪಳ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 41/2024 ಕಲಂ: ಮನುಷ್ಯ ಕಾಣೆ ಅಡಿ ಪ್ರಕರಣ ದಾಖಲಾಗಿದೆ.

**ವ್ಯಕ್ತಿಯ ಚಹರೆ** : ವ್ಯಕ್ತಿಯು 5.2 ಅಡಿ ಎತ್ತರವಿದ್ದು, ಸಾದಾಕಪ್ಪು ಮೈಬಣ್ಣ, ತೆಳುವಾದ ಮೈಕಟ್ಟು,ಉದ್ದಮೂಗು,ಕೋಲುಮುಖಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ನೀಲಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಲುಂಗಿ ಧರಿಸಿದ್ದರು.

ಮೇಲ್ಕಂಡ ಚಹರೆಯ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಕೊಪ್ಪಳ ಕಂಟ್ರೋಲ್ ರೂಂ.08539-230100, 230222, ನಗರ ಠಾಣೆ ಪಿಎಸ್‌ಐ: 9480803745, ನಗರ ಠಾಣೆ: 08539-220333 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಕೊಪ್ಪಳ ನಗರ ಪೊಲೀಸ್ ಠಾಣೆ ಪ್ರಕಟಣೆ ಕೋರಿದೆ.

# ಪದವಿ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಕೊಪ್ಪಳ** : 2025-26ನೇ ಶೈಕ್ಷಣಿಕ ಸಾಲಿನ ಬಿ.ಎ., ಬಿ.ಕಾಂ., ಬಿ.ಕಾಂ (AEDP), ಬಿ.ಎಸ್ಸಿ, ಬಿ.ಬಿ.ಎ. ಮತ್ತು ಬಿ.ಸಿ.ಎ. ಕೋರ್ಸುಗಳಿಗೆ ಕೊಪ್ಪಳ ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಸಂಯೋಜಿತ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನೇತರ ಮಹಾವಿದ್ಯಾಲಯಗಳಲ್ಲಿ ಪ್ರಥಮ ವರ್ಷ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

UUCMS (https://uucms.karnataka.gov.in/) ತಂತ್ರಾಂಶದ ಮುಖಾಂತರ ಆಗಸ್ಟ್ 31 ರವರೆಗೆ ಅರ್ಜಿಗಳನ್ನು ಸಲ್ಲಿಸಬಹುದು. ಎಲ್ಲಾ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗ ಪಡೆಸಿಕೊಂಡು ನಿಗದಿತ ದಿನಾಂಕದ ಒಳಗೆ ಪ್ರವೇಶಾತಿಯನ್ನು ಪಡೆದುಕೊಳ್ಳಬಹುದು. ಹೆಚ್ಚಿನ ವಿವರಗಳಿಗಾಗಿ ಕೊಪ್ಪಳ ವಿಶ್ವವಿದ್ಯಾಲಯದ ಜಾಲತಾಣವನ್ನು www.koppaluniversity.ac.in ಅನ್ನು ವೀಕ್ಷಿಸಬಹುದು ಎಂದು ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಮನವಿ



**ಕೊಪ್ಪಳ:** ಕೊಪ್ಪಳದ ಬೆಂಕಿನಗರ ನಿವಾಸಿಯಾದ ಖಾಜಾ ಹುಸೇನ್ ಮಾಬು ಸಾಬ ಕಳಸಾಪೂರ ಎಂಬ 54 ವರ್ಷದವ್ಯಕ್ತಿಯು2024ರಅಕ್ಟೋಬರ್ 25 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಕೊಪ್ಪಳ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 13/2025 ಕಲಂ: ಮನುಷ್ಯ ಕಾಣೆ ಅಡಿ ಪ್ರಕರಣ ದಾಖಲಾಗಿದೆ.

**ವ್ಯಕ್ತಿಯ ಚಹರೆ:** ವ್ಯಕ್ತಿಯು 5.6 ಅಡಿ ಎತ್ತರವಿದ್ದು, ಸಾದಾಕಪ್ಪು ಮೈಬಣ್ಣ, ಸದೃಢ ಮೈಕಟ್ಟು, ದುಂಡುಮುಖ ಹೊಂದಿದ್ದು, ಕನ್ನಡ, ತೆಲುಗು, ಹಿಂದಿ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಬಿಳಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿದ್ದರು.

ಮೇಲ್ಕಂಡ ಚಹರೆಯ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಕೊಪ್ಪಳ ಕಂಟ್ರೋಲ್ ರೂಂ.08539-230100, 230222, ನಗರ ಠಾಣೆ ಪಿಎಸ್‌ಐ: 9480803745, ನಗರ ಠಾಣೆ: 08539-220333 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಕೊಪ್ಪಳ ನಗರ ಪೊಲೀಸ್ ಠಾಣೆ ಪ್ರಕಟಣೆ ಕೋರಿದೆ.

# ಪ್ರತಿನಿತ್ಯ ಯೋಗ ಮಾಡಿ, ಸದೃಢರಾಗಿರಿ

**ಇಳಕಲ್ :** ತಾಲೂಕಿನ ಸರಕಾರಿ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆ, ನಂದವಾಡಗಿಯಲ್ಲಿ ಜೂನ್ 21 ರಂದು ವಿಶ್ವ ಯೋಗ ದಿನಾಚರಣೆಯನ್ನು ಆಚರಿಸಲಾಯಿತು. "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಧ್ಯೇಯ ವಾಕ್ಯದೊಂದಿಗೆ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಾಯಿತು. ಯೋಗ ಅರ್ಥ, ಮಹತ್ವ ಪ್ರತಿನಿತ್ಯ ಯೋಗ ಮಾಡಿ ರೋಗ ಓಡಿಸಿ ಎಂದು ಪ್ರಾಸ್ತಾವಿಕವಾಗಿ ಶಾಲೆಯ ಮುಖ್ಯ ಗುರುಮಾತೆ ವಿ ಬಿ ಕುಂಬಾರ ಮಾತನಾಡಿದರು. ಶಾಲೆಯ ದೈಹಿಕ ಶಿಕ್ಷಕಿ ಎಸ್ ಬಿ ಮಲಗಿಹಾಳರವರು ಮಕ್ಕಳಿಗೆ ಸೂರ್ಯ ನಮಸ್ಕಾರ, ಪ್ರಾಣಾಯಾಮ, ಯೋಗಾಸನ ವಿವಿಧ ಭಂಗಿಗಳನ್ನು ಮಾಡಿಸಿದರು. ನಂತರ ಯೋಗದ ಕುರಿತು ವಿದ್ಯಾರ್ಥಿನಿಯರ ಜೊತೆಗೆ ಸಂವಾದ ಕಾರ್ಯಕ್ರಮ ನಡೆಸಲಾಯಿತು. ಸಂಭ್ರಮ ಶನಿವಾರದ ವಿಷಯವನ್ನು ಮಕ್ಕಳಿಗೆ ಚಟುವಟಿಕೆ ಮಾಡಿಸಿ ಬ್ಯಾಗ್ ರಹಿತ ದಿನ ಕಾರ್ಯಕ್ರಮವನ್ನು ಆಚರಿಸಲಾಯಿತು. ಶಾಲೆಯ ಶಿಕ್ಷಕಿಯರಾದ ಜ್ಯೋತಿ, ಜಿ ಆರ್ ನದಾಫ್, ಬಸವರಾಜ ಬಲಕುಂದಿ, ಡಾ. ವಿಶ್ವನಾಥ ತೋಟಿ, ಚಂದ್ರಶೇಖರ ಹುತಗಣ್ಣ, ಅಶ್ವಿನಿ ಕಪ್ಪರದ ಹಾಗೂ ವಿದ್ಯಾರ್ಥಿನಿಯರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಬಸವರಾಜ ಬಲಕುಂದಿ ನಿರೂಪಿಸಿದರು. ಡಾ ವಿಶ್ವನಾಥ ತೋಟಿ ಸ್ವಾಗತಿಸಿದರು. ಚಂದ್ರಶೇಖರ ಹುತಗಣ್ಣ ವಂದಿಸಿದರು.

# ರಾಯಲ್ ಪ್ಯಾಲೇಸ್ ಇಂಟರ ನ್ಯಾಷನಲ್ ಸ್ಕೂಲ್‌ನಲ್ಲಿ ಅಂತರಾಷ್ಟ್ರೀಯ ಯೋಗ ದಿನ ಆಚರಣೆ



**ಲೋಕಾಪುರ** : ಯೋಗವೆಂದರೆ ಆಸನ-ಪ್ರಾಣಾಯಾಮಗಳಷ್ಟೇ ಅಲ್ಲದೆ, ಅಥವಾ ಎಂಟು ಅಂಗಗಳಿರುವಯೋಗಶಾಸ್ತ್ರವಷ್ಟೇ ಅಲ್ಲದೆ ಅದು ಭಾರತವು ಸಾಕ್ಷಾತ್ಕರಿಸಿಕೊಂಡಿರುವ ಒಂದು ಜೀವನದ ದೃಷ್ಟಿಯಾಗಿದೆ ಎಂದು ಬಾಲಾಜಿ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಅಲ್ಲಸಾಬ ಯಾದವಾಡ ಹೇಳಿದರು.

ಪಟ್ಟಣದ ಬಾಲಾಜಿ ವಿದ್ಯಾವರ್ಧಕ ಸಂಘದ ರಾಯಲ್ ಪ್ಯಾಲೇಸ್ ಇಂಟರ ನ್ಯಾಷನಲ್ ಸ್ಕೂಲ್ನಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ವಿದ್ಯಾರ್ಥಿಗಳು ಯೋಗದ ಮಹತ್ವವನ್ನು ಅರ್ಥಮಾಡಿಕೊಂಡು ದೈನಂದಿನ ಜೀವನದಲ್ಲಿ ಶಾರೀರಿಕ ಹಾಗೂ ಮಾನಸಿಕ ಆರೋಗ್ಯವನ್ನು ಬೆಳೆಸಲು ಪ್ರೇರಣೆಯಾಗಲಿದೆ ಎಂದು ಸಲಹೆ ನೀಡಿದರು.

ಪ್ರಾಂಶುಪಾಲರು ಮತ್ತು ಆಡಳಿತಾಧಿಕಾರಿ ಡಾ. ಭಾರತಿ ಗೌಡನಹಳ್ಳಿ ವಿದ್ಯಾರ್ಥಿಗಳಿಗೆ ಯೋಗದ ಇತಿಹಾಸ, ಅದರ ಪ್ರಾಚೀನತೆಯು ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಅದರ ಪ್ರಭಾವದ ಕುರಿತು ತಿಳಿಸಿದರು.

ಬಾಲಾಜಿ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಅಲ್ಲಸಾಬ ಯಾದವಾಡ, ಸಂಸ್ಥೆ ಕಾರ್ಯದರ್ಶಿ ಸೋಮಶೇಖರ ಲೋಹಾರ, ಪ್ರಾಂಶುಪಾಲರು ಮತ್ತು ಆಡಳಿತಾಧಿಕಾರಿ ಡಾ. ಭಾರತಿ ಗೌಡನಹಳ್ಳಿ, ದೈಹಿಕ ಶಿಕ್ಷಕ ಬಸವರಾಜ ರಡರಟ್ಟಿ, ವೀರೇಶ ಎಸ್.ಎಲ್, ಅಲ್ಲಾಭಕ್ಷ ಹುನಗುಂದ, ಭಾಗ್ಯಶ್ರೀ ಕುಳಲಿ, ಬಸವರಾಜ ಗಡ್ಡದವರ, ರೋಹಿತ ಕಬರಳ್ಳಿ, ರಂಗಪ್ಪ ದೋಡಮನಿ, ಸ್ನೇಹಾ ಬಿ.ಎಚ್, ವನಿತಾ ಆಗೇರ್, ಲಾವಣ್ಯ ಆಚಾರಿ, ಗುರುರಾಜ ಜುಮನಾಲ, ಸುವರ್ಣಾ ಕಿಲಾರದ, ಶಿವಾಜಿ ಕುಡೆ, ಗಿರಿಯವ್ವ ಭೂಮರಟ್ಟಿ, ಶಿವಾನಂದ ಉಪ್ಪಾರ, ಅಕ್ಷತಾ ಕತ್ತಿ, ಶಿಕ್ಷಕ ವೃಂದ, ವಿದ್ಯಾರ್ಥಿಗಳು, ಸಿಬ್ಬಂದಿ ಇದ್ದರು.

# ಮಲ್ಲಮ್ಮ,ಅಂಬೇಡ್ಕರ ಭಾವಚಿತ್ರಕ್ಕೆ ಅವಮಾನ ಬಿ.ಎಂ.ಪಾಟೀಲ್ ಖಂಡನೆ



**ಬಾಗಲಕೋಟೆ:** ಇತ್ತೀಚಿಗೆ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕರ್ತವ್ಯ ಲೋಪದಿಂದಾಗಿ ಕಛೇರಿ ಮುಂಭಾಗದಲ್ಲಿರುವ ಕಸದ ತೊಟ್ಟಿಯಲ್ಲಿ ರೆಡ್ಡಿ ಸಮುದಾಯದ ಆರಾಧ್ಯ ದೇವತೆಯಾದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಹಾಗೂ ಭಾರತಕ್ಕೆ ಸಂವಿಧಾನ ನೀಡಿರುವ ಮಹಾನ್ ನಾಯಕ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಗಳನ್ನು ತೊಟ್ಟಿಯಲ್ಲಿ ಎಸೆದು ಮಹನೀಯರಿಗೆ ಅವಮಾನಿ ಸಿರುವ ಘಟನೆ ನಿಜವಾಗಿಯೂ ಖಂಡನೀಯ ಎಂದು ಅಖಿಲ ಭಾರತ ರೆಡ್ಡಿ ಒಕ್ಕೂಟದ ರಾಜ್ಯ ಕಾರ್ಯ ಕಾರಿಣಿಯ ಸದಸ್ಯ ಬಿ.ಎಂ.ಪಾಟೀಲ್ ತೀವ್ರವಾಗಿಖಂಡಿಸಿಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೂಡಲೇ ಜಿಲ್ಲಾಧಿಕಾರಿಯವರು ಮೌನ ವಹಿಸದೆ ತಪ್ಪಿತಸ್ಥರ ಮೇಲೆ ಕಠಿಣ ಕ್ರಮ ಜರುಗಿಸಬೇಕು ಎಂದು ಬಿ.ಎಂ.ಪಾಟೀಲ್ ಆಗ್ರಹಿಸಿದ್ದಾರೆ. ಪತ್ರಿಕಾ ಪ್ರಕಟಣೆ ನೀಡಿರುವ ಪಾಟೀಲ್ ಜಿಲ್ಲಾ ಆಡಳಿತ ಭವನದ ಜಿಲ್ಲಾಧಿಕಾರಿಯವರ ಕಛೇರಿಯ ಆವರಣದಲ್ಲಿಯೇ ಈ ರೀತಿ ಮಹಾಪುರುಷರ ಭಾವಚಿತ್ರಗಳಿಗೆ ಅವಮಾನಿಸುವ ಘಟನೆ ನಡೆದರೆ ಅದು ಬಾಗಲಕೋಟೆಯ ಜಿಲ್ಲಾಡಳಿತಕ್ಕೆ ಕಪ್ಪುಚುಕ್ಕೆ. ಮುಂದಿನ ದಿನಗಳಲ್ಲಿ ಈ ರೀತಿ ಪುನರಾವರ್ತನೆ ಆದಲ್ಲಿ ಜಿಲ್ಲಾಡಳಿತದ ವಿರುದ್ಧ ಅಖಿಲ ಭಾರತರೆಡ್ಡಿಒಕ್ಕೂಟಹಾಗೂದಲಿತ ಪರ ಸಂಘಟನೆಗಳು ಹೋರಾಟಕ್ಕೆ ಮುಂದಾಗಬೇಕಾಗುತ್ತದೆ ಎಂದು ಅಖಿಲ ಭಾರತ ರೆಡ್ಡಿ ಒಕ್ಕೂಟದ ರಾಜ್ಯ ಕಾರ್ಯಕಾರಿಣಿಯ ಸದಸ್ಯರಾದ ಬಿ.ಎಂ.ಪಾಟೀಲ ಜಿಲ್ಲಾಡಳಿತವನ್ನು ಎಚ್ಚರಿಸಿದ್ದಾರೆ.

# ದಲಿತ ಸಾಹಿತ್ಯ ಸಮ್ಮೇಳನ ಮುಂದೂಡಿಕೆ

**ರಾಯಚೂರು :** ಇಲ್ಲಿ ಜೂನ್ ತಿಂಗಳ 28 ಹಾಗೂ 29 ರಂದು ಜರುಗಲಿದ್ದ ಹನ್ನೊಂದನೇ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನವನ್ನು ಅನಿವಾರ್ಯ ಕಾರಣಗಳಿಂದ ಮುಂದೂಡಲಾಗಿದೆ. 2025 ರ ಅಕ್ಟೋಬರ್ ತಿಂಗಳ 4 ಹಾಗೂ 5 ರಂದು ನಡೆಸಲಾಗುವುದು ಎಂದು ದಲಿತ ಸಾಹಿತ್ಯ ಪರಿಷತ್ತಿನ ರಾಜ್ಯಧ್ಯಕ್ಷರಾದ ಡಾ. ಅರ್ಜುನ ಗೊಳಸಂಗಿ ತಿಳಿಸಿದ್ದಾರೆ ಎಂದು ವಿಜಯಪುರ ಜಿಲ್ಲಾ ದಲಿತ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಬಸವರಾಜ ಸಾಲವಾಡಗಿ ತಿಳಿಸಿದ್ದಾರೆ.

# ಹಗರಿಬೊಮ್ಮನಹಳ್ಳಿ ಸಿಪಿಐ ವಿಕಾಸ್ ಲಮಾಣಿ ಅವರಿಂದ ಕಲ್ಲೇಶ್ ಅವರಿಗೆ ಮುಂಬಡ್ತಿ ನೀಡಿ ಸನ್ಮಾನ



**ಕೊಟ್ಟೂರು :** ಪೊಲೀಸ್ ಇಲಾಖೆಯಲ್ಲಿ ಪ್ರಮಾಣಿಕ ಸೇವೆ ಸಲ್ಲಿಸಿದ್ದ ಕೊಟ್ಟೂರು ಪೊಲೀಸ್ ಠಾಣೆಯ ಕಾನ್ ಸ್ಟೇಬಲ್ ಕಲ್ಲೇಶ್ ಅವರು ಹೆಡ್ ಕಾನ್‌ಸ್ಟೇಬಲ್ ಹುದ್ದೆಗೆ ಮುಂಬಡ್ತಿ ನೀಡಲಾಯಿತು

ಹಗರಿಬೊಮ್ಮನಹಳ್ಳಿ ಸಿಪಿಐ ವಿಕಾಸ್ ಲಮಾಣಿ ಹಾಗೂ ಕೊಟ್ಟೂರು

ಪಿಎಸ್‌ಐ ಗೀತಾಂಜಲಿ ಸಿಂಧೆ ಶುಕ್ರವಾರ ಠಾಣೆಯಲ್ಲಿ ಅಭಿನಂದಿಸಿ ಗೌರವಿಸಿದರು.

ಪಡೆದಿರುವ ಹುದ್ದೆಯಲ್ಲಿ ಪ್ರಾಮಾಣಿಕ ,ಶ್ರದ್ದೆ ಮತ್ತು ನಿಷ್ಠೆಯಿಂದ ಸೇವೆಯನ್ನು ಸಲ್ಲಿಸಿ ಇನ್ನೂ ಉನ್ನತ ಹುದ್ದೆಯು ದೊರೆಯುವಂತಾಗಲಿ ಎಂದು ಪಿಎಸ್‌ಐ ಗೀತಾಂಜಲಿ ಸಿಂಧೆ ಶುಭ ಹಾರೈಸಿದರು.

ಒಳ್ಳೆಯ ಕರ್ತವ್ಯ ನಿರ್ವಹಿಸಿದ ಕಾನ್ ಸ್ಟೇಬಲ್ ಕಲ್ಲೇಶ್ ಅವರಿಗೆ ಸಾರ್ವಜನಿಕ ವಲಯದಲ್ಲಿ ಮುಂಬಡ್ತಿ ಪಡೆದಿದ್ದಕ್ಕೆ ಸಂಘ, ಸಂಸ್ಥೆ ,ಸಂಘಟನೆಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಪೊಲೀಸ್ ಇಲಾಖೆ ಸಿಬ್ಬಂದಿ ಶಶಿಧರ ಸ್ವಾಮಿ, ಚಂದ್ರಶೇಖರ್,ವಿಷ್ಣು , ಬಸವರಾಜ್, ಶಂಕ್ರಪ್ಪ, ಸಿದ್ದಪ್ಪ, ರಮೇಶ್, ಸಂತೋಷ,ಬಸವರಾಜ್, ಎರ್ರಿಸ್ವಾಮಿ ಹಾಗೂ ಠಾಣೆಯ ಎಲ್ಲಾ ಸಿಬ್ಬಂದಿ ಇದ್ದರು.

# ಯು.ಜೆ.ಎಸ್.ಎಸ್.ಇಂಡಿಪೆಂಡೆಂಟ್‌ಪಿಯುಕಾಲೇಜಿನಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ





**ಹೊಸಪೇಟೆ** : ವಿವಿ ಸಂಘದ ಬಳ್ಳಾರಿ ಇವರ ನೇತೃತ್ವದಲ್ಲಿ ನಡೆದ ಹೊಸಪೇಟೆ ಯು.ಜೆ.ಎಸ್. ಎಸ್.ಇಂಡಿಪೆಂಡೆಂಟ್ ಪಿಯು ಕಾಲೇಜಿನಲ್ಲಿ ಶನಿವಾರ ನಡೆದ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾಲೇಜು ಆವರಣದಲ್ಲಿ ಕಾರ್ಯಕ್ರಮ ಆಯೋಜಿಸಲಾಯಿತು.

ಯೋಗ ಶಿಕ್ಷಕರಾದ ವೆಂಕಟೇಶ್ ವಾಸಿ ಅವರ ಸಂಯೋಗದಲ್ಲಿ ಯೋಗ ಪ್ರದರ್ಶನ ನಡೆಯಿತು. ಯೋಗಾಸನದ ಬಗ್ಗೆ ತಿಳಿ ಹೇಳಿದರು ವಿದ್ಯಾರ್ಥಿಗಳು,ಹಾಗೂ ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷರು ಮೆಟ್ರಿ ಮಲ್ಲಿಕಾರ್ಜುನ್, ಕಾಲೇಜ್ ಪ್ರಾಂಶುಪಾಲರಾದ ನಾಗೇಶ್ ಬಾಬು ಮತ್ತು ಉಪನ್ಯಾಸಕರು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಭಾಗಿಯಾಗಿದ್ದರು ಉತ್ಸಾಹದಿಂದ ಯೋಗ ಪಟುಗಳು ಭಾಗವಹಿಸಿ ಯಶಸ್ವಿಗೊಳಿಸಿದಕ್ಕೆ ಹರ್ಷ ವ್ಯಕ್ತಪಡಿಸಿದರು.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State

Designed by MKG-9535762618